ಸಂಪುಟ : 10 ಸಂಚಿಕೆ: 223 ಪುಟ : 4+2 ಬೆಲೆ: 3.00 ಬುಧವಾರ ಅಕ್ಟೋಬರ್ 15 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 223 Pages : 4+2 Price : 3.00 Wednesday October 15 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಪ್ರವಾಸೋದ್ಯಮದ ಹೊಸ ಉಪಕ್ರಮಗಳ ಬಗ್ಗೆ ರಾಜ್ಯ ಪ್ರವಾಸೋದ್ಯಮ ಸಚಿವರ ಸಮ್ಮೇಳನದಲ್ಲಿ ಸಚಿವ ಎಚ್.ಕೆ. ಪಾಟೀಲ

# ಲಕ್ಕುಂಡಿಗೆ ಯುನೆಸ್ಕೋ ಜಾಗತಿಕ ಪಾರಂಪರಿಕ ತಾಣದ ಸ್ಥಾನಮಾನ




■ವಿಜಯಸಾಕ್ಷಿ ಸುದ್ದಿ, ಉದಯಪುರ/ಗದಗ

ಗದಗ ಜಿಲ್ಲೆಯ ಲಕ್ಕುಂಡಿಯನ್ನು ಯುನೆಸ್ಕೋ ಜಾಗತಿಕ ಪಾರಂಪರಿಕ ತಾಣದ ಸ್ಥಾನಮಾನವನ್ನು ದೊರಕಿಸಲು ಕರ್ನಾಟಕ ಸರ್ಕಾರ ಕಾರ್ಯೋನ್ಮುಖವಾಗಿದೆ. ತನ್ಮೂಲಕ ಕರ್ನಾಟಕವನ್ನು ಪಾರಂಪರಿಕ ಪ್ರವಾಸೋದ್ಯಮದ ಮುಂಚೂಣಿ ರಾಜ್ಯವನ್ನಾಗಿ ಪರಿವರ್ತಿಸಲು ಶ್ರಮಿಸುತ್ತಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಪ್ರಕಟಿಸಿದರು.

ರಾಜಸ್ಥಾನದ ಉದಯಪುರದಲ್ಲಿ ಅಕ್ಟೋಬರ್ 14 ಮತ್ತು 15ರಂದು ನಡೆಯುತ್ತಿರುವ ಪ್ರವಾಸೋದ್ಯಮದ ಹೊಸ ಉಪಕ್ರಮಗಳ ಬಗ್ಗೆ ರಾಜ್ಯ ಪ್ರವಾಸೋದ್ಯಮ ಸಚಿವರ ಸಮ್ಮೇಳನದ ಮೊದಲ ದಿನವಾದ ಮಂಗಳವಾರ ಸಚಿವರು ಮಾತನಾಡುತ್ತಿದ್ದರು.

ಜಾಗತಿಕ ಸ್ಪರ್ಧಾತ್ಮಕ ಪ್ರವಾಸೋದ್ಯಮದ 50 ತಾಣಗಳನ್ನು ಅಭಿವೃದ್ಧಿಪಡಿಸುವ ಕೇಂದ್ರ ಸರ್ಕಾರದ ರಾಷ್ಟ್ರೀಯ ಮಿಷನ್ ಅಡಿಯಲ್ಲಿ ಕರ್ನಾಟಕ ಸರ್ಕಾರವು ಗದಗ, ಹಂಪಿ, ಮೈಸೂರು ಮತ್ತು ಉಡುಪಿಗಳನ್ನು ಭವಿಷ್ಯೋತ್ತರ ಜಾಗತಿಕ ತಾಣಗಳೆಂದು ಪರಿಗಣಿಸುವಂತೆ ಕರ್ನಾಟಕ ಸರ್ಕಾರ ಪ್ರಸ್ತಾಪಿಸಿದೆ. ಪಾರಂಪರಿಕ ಜಾಗತಿಕ ತಾಣದ ಎಲೆಮರೆಯ ಕಾಯಿಯಂತೆ ಅನರ್ಘ್ಯ ರತ್ನದಂತಹ ತಾಣವಾಗಿರುವ ಗದಗ ಪರಂಪರೆ, ನಿಸರ್ಗ ಮತ್ತು ಸಂಸ್ಕೃತಿಗಳ ಸಮ್ಮಿಲನವಾಗಿ ಪರಿಪಕ್ವವಾದ ಸೌಹಾರ್ದತೆಯನ್ನು ಪಡೆದಿದ್ದು, ಗದಗ ಜಿಲ್ಲೆ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ಕೇವಲ 40 ನಿಮಿಷಗಳ ಪ್ರಯಾಣದ ದೂರದಲ್ಲಿದೆ. ಗದುಗಿನಿಂದ ಕೇವಲ 8 ಕಿ.ಮೀ ದೂರದಲ್ಲಿರುವ ಲಕ್ಕುಂಡಿ ಚಾಲುಕ್ಯರ ಶಿಲ್ಪಕಲೆಯ ಬಯಲು ವಸ್ತುಸಂಗ್ರಹಾಲಯವೆಂದು ಕರೆಯಲ್ಪಡುತ್ತದೆ. 100 ಗಹನವಾದ ಕೆತ್ತನೆಯ ದೇವಾಲಯಗಳು, ಆಳವಾದ ಬಾವಿಗಳು, ಜೈನ ಬಸದಿಗಳು ಮತ್ತು ಪ್ರಾಚೀನ ಯುಗದ ಶಿಲ್ಪಕಲೆಯ ಚಾಣಾಕ್ಷತನವನ್ನು ಪ್ರತಿಬಿಂಬಿಸುವ ಶಿಲಾಶಾಸನಗಳನ್ನು ಹೊಂದಿದೆ.

> ಭಾರತವನ್ನು ಜಾಗತಿಕ ಪ್ರವಾಸೋದ್ಯಮ ತಾಣವನ್ನಾಗಿ ಪರಿವರ್ತಿಸಲು ಕರ್ನಾಟಕ ಬದ್ಧವಾಗಿದೆ. ಕೇಂದ್ರ ಮತ್ತು ಇತರ ರಾಜ್ಯಗಳ ಸಂಯೋಜನೆಯೊಂದಿಗೆ ಕರ್ನಾಟಕವನ್ನು ಜಾಗತಿಕ ಪ್ರವಾಸೋದ್ಯಮದ ಶಕ್ತಿ ಕೇಂದ್ರವನ್ನಾಗಿಸಲು ಕರ್ನಾಟಕವು ತನ್ನೆಲ್ಲಾ ಶಕ್ತಿಯನ್ನು ಧಾರೆ ಎರೆಯುತ್ತದೆ.
>
> – ಎಚ್.ಕೆ. ಪಾಟೀಲ.
> ಪ್ರವಾಸೋದ್ಯಮ ಸಚಿವರು.




ಗದಗ ನಗರವು ತ್ರಿಕೂಟೇಶ್ವರ ದೇವಸ್ಥಾನ, ಸರಸ್ವತಿ ದೇವಸ್ಥಾನ, ವೀರನಾರಾಯಣ ದೇವಸ್ಥಾನ, ಡಂಬಳದ ದೊಡ್ಡಬಸಪ್ಪನ ದೇವಸ್ಥಾನಗಳು ಮತ್ತು ಪ್ರಾಚೀನ ಕೋಟೆಗಳು ಭಾರತೀಯ ಶಿಲ್ಪಕಲೆಯನ್ನು ಶ್ರೀಮಂತಗೊಳಿಸಿದ ರಾಜಮನೆತನಗಳ ಕಥೆಗಳನ್ನು ವರ್ಣಿಸುತ್ತಿವೆ. ಗದುಗಿನ ಭಾರತ ರತ್ನ ಪಂಡಿತ ಭೀಮಸೇನ್ ಜೋಶಿಯವರು ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತಕ್ಕೆ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮನ್ನಣೆ ದೊರಕಿಸಿಕೊಡುವಲ್ಲಿ ಬಹುದೊಡ್ಡ ಕೊಡುಗೆ ನೀಡಿ, ಕರ್ನಾಟಕದ ಶ್ರೀಮಂತ ಸಂಗೀತ ಪರಂಪರೆಯನ್ನು ವಿಶ್ವದಲ್ಲಿ ಹಾಸುಹೊಕ್ಕಾಗುವಂತೆ ಮಾಡಿದರು ಎಂದು ಸಚಿವರು ವಿವರಿಸಿದರು.

ಕಳೆದ 2 ವರ್ಷಗಳಲ್ಲಿ ಕರ್ನಾಟಕ ಸರ್ಕಾರವು ಸವದತ್ತಿ ಯಲ್ಲಮ್ಮನ ಗುಡ್ಡದ ಸಮಗ್ರ ಅಭಿವೃದ್ಧಿಗೆ, ಅಂಜನಾದ್ರಿ ಬೆಟ್ಟ, ಹಂಪಿ, ಮೈಸೂರು, ಬೀದರ, ಉಡುಪಿ ಹಾಗೂ ಬೆಂಗಳೂರು ಬಳಿಯ ರೋರಿಕ್ ಎಸ್ಟೇಟ್‌ಗಳ ಅಭಿವೃದ್ಧಿ ಕಾರ್ಯವನ್ನು ಕೈಗೆತ್ತಿಕೊಂಡಿದ್ದು, ಕಾಲಮಿತಿಗೊಳಪಟ್ಟು ಈ ಯೋಜನೆಗಳನ್ನು ಪೂರ್ಣಗೊಳಿಸಲು ಶ್ರಮಿಸುತ್ತಿದೆ. 343 ಕಿ.ಮೀ ಉದ್ದದ ಕರಾವಳಿಯನ್ನು ಕೇಂದ್ರೀಕೃತವಾಗಿಸಿ, ಅಭಿವೃದ್ಧಿಪಡಿಸಿ ಉನ್ನತ ಸ್ಥರದ ಪ್ರವಾಸೋದ್ಯಮ ತಾಣವನ್ನಾಗಿ ಪರಿವರ್ತಿಸಲು ಪ್ರತ್ಯೇಕ ಕರಾವಳಿ ಪ್ರವಾಸೋದ್ಯಮ ನೀತಿಯನ್ನು ಸಿದ್ಧಪಡಿಸುತ್ತಿದೆ ಎಂದು ಸಭೆಗೆ ವಿವರಿಸಿದರು. ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರಸಿಂಗ್ ಶೇಖಾವತ್ ಹಾಗೂ ಎಲ್ಲಾ ರಾಜ್ಯದ ಪ್ರವಾಸೋದ್ಯಮ ಸಚಿವರು ಸಮ್ಮೇಳನದಲ್ಲಿ ಭಾಗವಹಿಸಿದ್ದರು.

---

## ಸಮುದಾಯ ಭವನ ಭೂಮಿ ಪೂಜೆ ಇಂದು

■ವಿಜಯಸಾಕ್ಷಿ ಸುದ್ದಿ, ರೋಣ

ಸಿದ್ದಶ್ರೀ ಸರ್ವಧರ್ಮ ಸಮುದಾಯ ಭವನ ನಿರ್ಮಾಣದ ಭೂಮಿಪೂಜಾ ಕಾರ್ಯಕ್ರಮವು ಅ.15ರಂದು ಸಂಜೆ 4.30ಕ್ಕೆ ಮಾರನಬಸರಿ ಗ್ರಾಮದಲ್ಲಿ ನೇರವೇರಲಿದೆ ಎಂದು ಸಿದ್ದನಕೊಳ್ಳದ ನಿರಂತರ ದಾಸೋಹ ಮಠದ ಡಾ. ಶಿವಕುಮಾರ ಶ್ರೀಗಳು ಹೇಳಿದರು.

ಅವರು ಮಂಗಳವಾರ ಮಾರನಬಸರಿ ಗ್ರಾಮದ ಸರ್ವಧರ್ಮ ಸಮನ್ವಯ ಪೀಠದ ಸಭಾಭವನದಲ್ಲಿ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದರು.

ಮಾರನಬಸರಿ ಗ್ರಾಮ ಸಿದ್ದನಕೊಳ್ಳದ ಸಿದ್ದಯ್ಯಜ್ಜನವರು ಜನ್ಮ ತಾಳಿರುವ ಪುಣ್ಯ ಕ್ಷೇತ್ರವಾಗಿದೆ. ಈ ಪುಣ್ಯದ ನೆಲದಲ್ಲಿ ಸರ್ವಧರ್ಮ ಸಮುದಾಯ ಭವನ ನಿರ್ಮಾಣಗೊಳ್ಳುತ್ತಿರುವುದು ಸಂತಸದ ಸಂಗತಿ.

ಶಾಸಕ ಜಿ.ಎಸ್. ಪಾಟೀಲ ಭೂಮಿಪೂಜೆಯನ್ನು ನೆರವೇರಿಸಲಿದ್ದು, ಶಿವಮೊಗ್ಗ ಜಿಲ್ಲೆಯ ಸೊರಬ ತಾಲೂಕಿನ ಹಿರೇಮಾಗಡಿ ವಿರಕ್ತಮಠದ ಮತ್ತು ಗ್ರಾಮದ ಸರ್ವಧರ್ಮ ಸಮನ್ವಯ ಪೀಠದ ಶ್ರೀಗಳಾದ ಶಿವಮೂರ್ತಿ ಮುರುಘರಾಜೇಂದ್ರ ಶ್ರೀಗಳು ಸಾನ್ನಿಧ್ಯ ವಹಿಸಲಿದ್ದಾರೆ. ತ್ರಯಂಬಕೇಶ್ವರ ದೇವಸ್ಥಾನದ ಅರ್ಚಕರಾದ ವೇ.ಮೂ. ವಿಶ್ವನಾಥ ಭಟ್ಟ ವೈದ್ಯರು ಉಪಸ್ಥಿತರಿರುವರು. ಅಂದಪ್ಪ ಮರಡಿ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಸಂಜೆ ಶ್ರೀಮಠದಿಂದ ಸಾಂಸ್ಕೃತಿಕ ಕಾರ್ಯಕ್ರಮ, ಸನ್ಮಾನ ಕಾರ್ಯಕ್ರಮಗಳು ನಡೆಯಲಿವೆ. ಕಾರ್ಯಕ್ರಮದಲ್ಲಿ ಎಂ.ಎಸ್. ಧಡೆಸೂರಮಠ, ಅಂದಾನಪ್ಪ ದೊಡ್ಡಮೇಟಿ, ಅಂದಪ್ಪ ಬಿಚ್ಚೂರ, ಬಸವರಾಜ ನವಲಗುಂದ, ವೇ. ಮೂ. ಚೆನ್ನಯ್ಯ ಹಿರೇಮಠ, ಡಾ. ಮಲ್ಲಿಕಾರ್ಜುನ ಕಂಬಾಳಿಹಿರೇಮಠ, ಶರಣಪ್ಪ ಕುರಿ, ಮರ್ತುಜಸಾಬ ಮೋತೆಖಾನ್, ಸಂಗನಬಸಪ್ಪ ಹಾದಿಮನಿ, ಶಿವಪ್ಪ ತಳವಾರ ಸೇರಿದಂತೆ ಅನೇಕ ಮುಖಂಡರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಬಸಯ್ಯ ಶಾಂತಗೀರಮಠ, ಶಿವಪ್ಪ ದಿಂಡೂರ, ಚಂದ್ರಶೇಖರ ವಸ್ತ್ರದ, ಹನ್ಮಂತಪ್ಪ ಹುದ್ದಾರ ಉಪಸ್ಥಿತರಿದ್ದರು.

---

### ಸೂಡಿ ಗ್ರಾ.ಪಂ ಸಿಬ್ಬಂದಿಗಳ ಸಭೆಯಲ್ಲಿ ಇಒ ಚಂದ್ರಶೇಖರ ಕಂದಕೂರ ಎಚ್ಚರಿಕೆ

# ಗ್ರಾಮಸ್ಥರ ಸಮಸ್ಯೆಗೆ ಧ್ವನಿಯಾಗಿ ಕೆಲಸ ಮಾಡಿ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮೂಲಭೂತ ಸೌಲಭ್ಯಗಳ ಕುರಿತು ಸಾರ್ವಜನಿಕರು ನೀಡುವ ಯಾವುದೇ ದೂರಿಗೆ ಗ್ರಾ.ಪಂ ಸಿಬ್ಬಂದಿ ವರ್ಗ ತಕ್ಷಣ ಸ್ಪಂದಿಸಬೇಕು ಎಂದು ಗಜೇಂದ್ರಗಡ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರು ಗ್ರಾ.ಪಂ ಸಿಬ್ಬಂದಿಗಳಿಗೆ ಸೂಚಿಸಿದರು.

ತಾಲೂಕಿನ ಸೂಡಿ ಗ್ರಾ.ಪಂ ಕಚೇರಿಯಲ್ಲಿ ಸಿಬ್ಬಂದಿಗಳೊಂದಿಗೆ ನಡೆಸಿದ ಸಭೆಯಲ್ಲಿ ಸಾರ್ವಜನಿಕ ಸ್ನೇಹಿಯಾಗಿ ಸಿಬ್ಬಂದಿಗಳು ಕೆಲಸ ಮಾಡಬೇಕು ಎಂದು ತಾಕೀತು ಮಾಡಿದರು.

ಸೂಡಿ ಮತ್ತು ದ್ಯಾಮಹುಣಸಿ ಗ್ರಾಮಗಳಲ್ಲಿ ಗ್ರಾಮಸ್ಥರಿಗೆ ಸರಿಯಾಗಿ ಕುಡಿಯುವ ನೀರು ಪೂರೈಕೆಯಾಗಬೇಕು.

ಮಲಪ್ರಭಾ ನೀರು ಬಿಡುಗಡೆ ಸಂದರ್ಭದಲ್ಲಿ ಗ್ರಾಮಸ್ಥರಿಗೆ ಸರಿಯಾದ ಮಾಹಿತಿ ನೀಡಬೇಕು. ಕುಡಿಯುವ ನೀರು ಎಲ್ಲೂ ಪೋಲಾಗದಂತೆ ನಿಗಾವಹಿಸಿ ಜನರಿಗೆ ಶುದ್ಧ ಕುಡಿಯುವ ನೀರನ್ನು ಗ್ರಾ.ಪಂ ಸಿಬ್ಬಂದಿ ಒದಗಿಸಬೇಕು. ಸರಿಯಾಗಿ ಕುಡಿಯುವ ನೀರು ಬಿಡದೇ, ಸಾರ್ವಜನಿಕರಿಗೆ ಸ್ಪಂದಿಸದೇ ಇದ್ದರೆ ವಾಟರ್‌ಮನ್ ಸಂಗಯ್ಯ ಅವರನ್ನು ಕೆಲಸದಿಂದ ತೆಗೆದುಹಾಕಿ ಎಂದು ಪಿಡಿಒ ಅವರಿಗೆ ಸೂಚಿಸಿದರು.

> ಗ್ರಾಪಂ ವ್ಯಾಪ್ತಿಯಲ್ಲಿ ರಾತ್ರಿ ವೇಳೆ ಬೀದಿ ದೀಪ ಬೆಳಗುವಂತಿರಬೇಕು. ಬೀದಿ ದೀಪದ ಕಂಬಗಳಲ್ಲಿ ಸಮರ್ಪಕ ವಿದ್ಯುತ್ ಸಂಪರ್ಕ, ವಿದ್ಯುತ್ ಬಲ್ಬ್‌ಗಳ ಅಳವಡಿಕೆಗೆ ಕ್ರಮ ವಹಿಸಬೇಕು. ಗ್ರಾ.ಪಂ ವ್ಯಾಪ್ತಿಯಲ್ಲಿ ಎಲ್ಲೆಂದರಲ್ಲಿ ಕಸ ಬಿಸಾಡದಂತೆ ಜಾಗೃತಿ ವಹಿಸಬೇಕು. ಕಸ ವಿಲೇವಾರಿ ಕಾರ್ಯ ಪ್ರತಿನಿತ್ಯ ನಡೆಯಬೇಕು. ಅನಧಿಕೃತವಾಗಿ ಗೈರಾಗಿ ಕಸ ವಿಲೇವಾರಿ ಮಾಡದಿದ್ದರೆ ಅಂತಹ ಸಿಬ್ಬಂದಿಗಳ ವಿರುದ್ಧ ಪಿಡಿಒ ಕ್ರಮ ವಹಿಸಬೇಕು.
>
> ಇಲ್ಲವೇ ಪಿಡಿಒ ಅವರ ವಿರುದ್ಧ ನಾನು ಕ್ರಮ ವಹಿಸುತ್ತೇನೆಂದು ಚಂದ್ರಶೇಖರ ಕಂದಕೂರ ಎಚ್ಚರಿಸಿದರು.

ಸಭೆಯಲ್ಲಿದ್ದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ ರೋಣ ಮತ್ತು ಗಜೇಂದ್ರಗಡದ ಶಾಖಾಧಿಕಾರಿ ಮಹದೇವಪ್ಪ ಅವರಿಗೆ ಸೂಡಿ ಗ್ರಾಮಕ್ಕೆ ಸರಬರಾಜಾಗುವ ಕುಡಿಯುವ ನೀರನ್ನು ವಿಳಂಬ ಮಾಡದೇ ಬಿಡಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಸೂಡಿ ಗ್ರಾ.ಪಂ ಪಿಡಿಒ ಬಸವರಾಜ ವಡ್ಡರ, ತೆರಿಗೆ ಸಂಗ್ರಹಕಾರ ದುರ್ಗಪ್ಪ, ಪಂಚಾಯಿತಿ ಕಾರ್ಯದರ್ಶಿ ಮುಕ್ತಾಬಾಯಿ ಜಾದವ್, ವಾಟರ್‌ಮನ್ ಸಂಗಯ್ಯ ಮತ್ತು ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

---

## ವಿಜಯ ಜ್ಯೋತಿಗೆ ಅದ್ದೂರಿ ಸ್ವಾಗತ




■ವಿಜಯಸಾಕ್ಷಿ ಸುದ್ದಿ, ಗದಗ

ಕಿತ್ತೂರು ಉತ್ಸವದ ಪ್ರಯುಕ್ತ ರಾಜ್ಯಾದ್ಯಂತ ಹಮ್ಮಿಕೊಂಡಿರುವ ವಿಜಯ ಜ್ಯೋತಿ ಯಾತ್ರೆಗೆ ಮಂಗಳವಾರ ನಗರದ ಪ್ರವಾಸಿ ಮಂದಿರದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಸ್ವಾಗತಿಸಿ ಪೂಜೆ ಸಲ್ಲಿಸಿದರು. ಕಿತ್ತೂರ ಚನ್ನಮ್ಮ ವಿಜಯ ಜ್ಯೋತಿಗೆ ಸ್ವಾಗತಿಸಿ, ರಥದಲ್ಲಿದ್ದ ರಾಣಿ ಚನ್ನಮ್ಮ ಪುತ್ಥಳಿಗೆ ಪುಷ್ಪಹಾರ ಅರ್ಪಿಸಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ನಗರದ ಪ್ರವಾಸಿ ಮಂದಿರದಿಂದ ವೀರಜ್ಯೋತಿ ಮೆರವಣಿಗೆಯು ಆರಂಭವಾಗಿ ಮುಳಗುಂದ ನಾಕಾ, ಎಸಿ ಕಚೇರಿ ಮೂಲಕ ಕಲಾ ತಂಡಗಳೊಂದಿಗೆ ಸಾಗಿ ಕಿತ್ತೂರ ಚನ್ನಮ್ಮ ವೃತ್ತ ತಲುಪಿ ಮುಂದೆ ಸಾಗಿತು.

ಬೆಳಗಾವಿ ಜಿಲ್ಲೆ ಕಿತ್ತೂರಿನಲ್ಲಿ ಅಕ್ಟೋಬರ್ 23ರಿಂದ 25ರವರೆಗೆ ನಡೆಯಲಿರುವ ಕಿತ್ತೂರು ಉತ್ಸವದ ಪ್ರಯುಕ್ತ ರಾಜ್ಯಾದ್ಯಂತ ಸಂಚರಿಸುವ ಈ ವಿಜಯ ಜ್ಯೋತಿ ಯಾತ್ರೆ ಹಾವೇರಿ ಜಿಲ್ಲೆಯಿಂದ ಗದಗ ಜಿಲ್ಲೆಗೆ ತಲುಪಿದ್ದು, ಲಕ್ಕುಂಡಿ ಮಾರ್ಗವಾಗಿ ಕೊಪ್ಪಳ ಜಿಲ್ಲೆಗೆ ಬೀಳ್ಕೊಡಲಾಯಿತು.

ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರ್ ಸಾಬ್ ಬಬರ್ಚಿ, ಗಣ್ಯರಾದ ಸಿದ್ದಪ್ಪ ಪಲ್ಲೇದ, ಎಮ್. ಎಸ್. ಕರಿಗೌಡರ್, ವಿಜಯಕುಮಾರ್ ಗಡ್ಡಿ, ಈರಣ್ಣ ಕರಿಬಿಷ್ಟಿ, ನಾಗರಾಜ ತುಪ್ಪದ, ಹಿರೇಮನಿ ಪಾಟೀಲ, ಫಕೀರಪ್ಪ ಮರಿಗೌಡ್ರ, ಮಹೇಶ ಕರಿಬಿಷ್ಟಿ, ಜೀವನಗೌಡ್ರ, ಹಂಚಿನಾಳ, ಈರಮ್ಮ, ವಸಂತ ಪಡಗದ, ಅಶೋಕ ಸಂಕಣ್ಣವರ, ಅಯ್ಯಪ್ಪ ಅಂಗಡಿ, ಸಿದ್ದು ನಾಲ್ವಾಡ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ವಾರ್ತಾಧಿಕಾರಿ ವಸಂತ ಮಡ್ಲೂರ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ರಾಜು ಕಂಟಿಗೊಣ್ಣವರ, ಶ್ರೀಧರ್ ಚಿನಗುಂಡಿ, ಪಾರ್ವತಿಮಠ, ರಾಜು ಸೋಪಡ್ಲ ಮತ್ತಿತರರು ಹಾಜರಿದ್ದರು.

---

## ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡದಿದ್ದರೆ ರಾಜೀನಾಮೆ

■ವಿಜಯಸಾಕ್ಷಿ ಸುದ್ದಿ, ರೋಣ



ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡದಿದ್ದರೆ ಅದು ಕುರುಬ ಸಮಾಜಕ್ಕೆ ಮಾಡಿದ ಅನ್ಯಾಯ. ಹೀಗಾಗಿ ನಾವು ನಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡುವ ನಿರ್ಧಾರ ಕೈಗೊಂಡಿದ್ದೇವೆ ಎಂದು ರೋಣ ಪುರಸಭೆ ಅಧ್ಯಕ್ಷೆ ಬಸಮ್ಮ ಕೊಪ್ಪದ ಹೇಳಿದರು.

ಅವರು ಪಟ್ಟಣದ ಪಿಡಬ್ಲುಡಿ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ಜಿ.ಎಸ್. ಪಾಟೀಲ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಟ್ಟಾಳು. ಅವರು ನಾಡು ಕಂಡ ಅಪ್ರತಿಮ ನಾಯಕ. ಅವರಿಗೆ ಸಚಿವ ಸ್ಥಾನ ನೀಡುವಲ್ಲಿ ಕಾಂಗ್ರೆಸ್ ಪಕ್ಷದ ವರಿಷ್ಠರು ಕಾಲಹರಣ ಮಾಡುತ್ತಿರುವುದು ಸಮಂಜಸವಲ್ಲ. ನಮ್ಮ ನಾಯಕರಿಗೆ ಸರಕಾರದಲ್ಲಿ ಸ್ಥಾನಮಾನ ಸಿಗುತ್ತಿಲ್ಲ ಎಂದಾದರೆ ನಾವೇಕೆ ಪಕ್ಷದ ಹುದ್ದೆಗಳಲ್ಲಿರಬೇಕು ಎನ್ನುವುದನ್ನು ಮನಗಂಡು ರಾಜೀನಾಮೆ ನೀಡಲು ತೀರ್ಮಾನಿಸಿದ್ದೇವೆ ಎಂದರು.

ಕಳೆದ 50 ವರ್ಷಗಳಿಂದ ಶಾಸಕ ಜಿ.ಎಸ್. ಪಾಟೀಲ ಮತಕ್ಷೇತ್ರದ ಪ್ರತಿಯೊಂದು ಸಮಾಜಗಳನ್ನು ತನ್ನ ಕುಟುಂಬದ ಸದಸ್ಯರಂತೆ ಕಂಡು, ಅವರ ಕಷ್ಟ–ಸುಖಗಳಲ್ಲಿ ಭಾಗಿಯಾಗಿ ಗದಗ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಿಷ್ಠಗೊಳಿಸಿದ್ದಾರೆ. ಇಂತಹ ಮಹಾನ್ ಚೇತನಕ್ಕೆ ಸಚಿವ ಸ್ಥಾನ ನೀಡುವಲ್ಲಿ ಪಕ್ಷದ ಹೈಕಮಾಂಡ್ ವಿಳಂಬ ಮಾಡಬಾರದು. ಪಕ್ಷ ಗಂಭೀರವಾಗಿ ಪರಿಗಣಿಸಿ ನ್ಯಾಯ ಒದಗಿಸುವ ಕೆಲಸ ಮಾಡಬೇಕು. ಇಲ್ಲದಿದ್ದರೆ ಪಕ್ಷದ ಹುದ್ದೆಗಳಿಗಷ್ಟೇ ಅಲ್ಲದೆ ಸಮಾಜದ ಹುದ್ದೆಗಳಿಗೂ ರಾಜೀನಾಮೆ ನೀಡುತ್ತೇವೆ ಎಂದು ಎಚ್ಚರಿಸಿದರು. ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ವ್ಹಿ.ಆರ್. ಗುಡಿಸಾಗರ, ರಾಜ್ಯ ಹಿಂದುಳಿದ ವರ್ಗಗಳ ಉಪಾಧ್ಯಕ್ಷ ಎಚ್.ಎಸ್. ಸೋಂಪುರ, ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಪ್ಪ ಬೆಟಗೇರಿ, ತಾಲೂಕಾ ಕುರುಬ ಸಮಾಜದ ಅಧ್ಯಕ್ಷ ಬಸವರಾಜ ಜಗ್ಗಲ, ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ, ಪ್ರಭಣ್ಣವರ, ಯುವ ಮುಖಂಡ ಗುರುನಾಥ ಕೊಪ್ಪದ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

---

## ಅಲ್ ಮದೀನಾ ಗ್ರೂಪ್‌ನಿಂದ ಕೃತಜ್ಞತಾ ಸಮಾರಂಭ ನಾಳೆ




■ವಿಜಯಸಾಕ್ಷಿ ಸುದ್ದಿ, ಗದಗ

28/09/2025ರಂದು ಗದಗ ಬೆಟಗೇರಿ ಅಂಜುಮನ್–ಏ–ಇಸ್ಲಾಂ ಸಂಸ್ಥೆಯ ಚುನಾವಣೆಯಲ್ಲಿ ನಮ್ಮ ತಂಡಕ್ಕೆ ಪ್ರತ್ಯಕ್ಷ–ಪರೋಕ್ಷವಾಗಿ ಬೆಂಬಲಿಸಿ ನಮ್ಮ 11 ಅಭ್ಯರ್ಥಿಗಳಿಗೆ ಮತ ನೀಡಿ, ನಮ್ಮ 3 ಅಭ್ಯರ್ಥಿಗಳನ್ನು ಗೆಲ್ಲಿಸಿದ್ದೀರಿ. ಈ ಹಿನ್ನೆಲೆಯಲ್ಲಿ ಗದಗ–ಬೆಟಗೇರಿ ಅವಳಿ ನಗರದ ಎಲ್ಲಾ ಮುಸ್ಲಿಂ ಸಮಾಜ ಬಾಂಧವರಿಗೆ ಕೃತಜ್ಞತಾ ಸಮಾರಂಭವನ್ನು ಅ. 16ರಂದು ಸಾಯಂಕಾಲ 5 ಗಂಟೆಗೆ ಗದಗ ನಗರದ ಜಾಕೀರ ಹುಸೇನ ಕಾಲೋನಿ ಹಾಲ್‌ನಲ್ಲಿ ಏರ್ಪಡಿಸಲಾಗಿದೆ ಎಂದು ಅಲ್ ಮದೀನಾ ಗ್ರೂಪ್‌ನ ನೇತೃತ್ವ ವಹಿಸಿದ್ದ ಬಾಷಾಸಾಬ ಮಲ್ಲಸಮುದ್ರ ತಿಳಿಸಿದರು.

ಈ ಕುರಿತು ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅವಳಿ ನಗರದ ಎಲ್ಲಾ ಮುಸ್ಲಿಂ ಸಮಾಜ ಬಾಂಧವರು ನಮ್ಮ ಕೃತಜ್ಞತಾ ಸಭೆಯಲ್ಲಿ ಪಾಲ್ಗೊಂಡು ನಮ್ಮ ಮುಂದಿನ ನಡೆಗೆ ಮಾರ್ಗದರ್ಶನ ಮಾಡಬೇಕೆಂದು ನಮ್ಮ ಅಲ್ ಮದೀನಾ ಗ್ರೂಪ್‌ನ ಸದಸ್ಯರಾದ ಆಸೀಫ್ ದಂಡಿನ, ಬಾಬು ನರಸಾಪೂರ, ಬಶೀರಸಾಬ ಸಂಕನಾಳ, ದಾವಲಸಾಬ ಮಲ್ಲಸಮುದ್ರ, ಕರೀಮಸಾಬ ಸುಣಗಾರ, ಮೆಹಬೂಬ ಹುನಗುಂದ, ಮೆಹಬೂಬಬಾಷಾ ಗಡಾದ, ಸಾಧಿಕ ಬುಡ್ಡೇಸಾಬ ನರೇಗಲ್ಲ, ಶಾಕೀರ ಕಾತರಕಿ, ಸುಲೇಮಾನ ಮಾಳೇಕೊಪ್ಪ, ಯುಸೂಫಸಾಬ ಕೊಟ್ಟೂರ ಪರವಾಗಿ ವಿನಂತಿಸುತ್ತೇನೆ ಎಂದರು.

ಈ ಚುನಾವಣೆಯಲ್ಲಿ ಅಲ್ ಮದಿನಾ ಗ್ರೂಪ್ 18,189 ಮತ ಪಡೆದಿದೆ. ಇಂಕ್ವಿಲಾಬ್ ಗ್ರೂಪ್ 23,457 ಮತ ಪಡೆದಿದ್ದರೆ, 19 ಪಕ್ಷೇತರ ಅಭ್ಯರ್ಥಿಗಳು 11,829 ಮತ ಪಡೆದಿದ್ದಾರೆ. ಒಟ್ಟು 53,475 ಮತದಾನ ಆಗಿದೆ ಎಂದು ಭಾಷಾಸಾಬ ಮಲ್ಲಸಮುದ್ರ ತಿಳಿಸಿದರು.

## ದಿ. ರಾಜು ತಾಳಿಕೋಟಿಯವರ ಅಂತಿಮ ದರ್ಶನ



■ **ವಿಜಯಸಾಕ್ಷಿ ಸುದ್ದಿ, ಧಾರವಾಡ**

ರಂಗಭೂಮಿ ಕಲಾವಿದ, ಧಾರವಾಡ ರಂಗಾಯಣ ನಿರ್ದೇಶಕರಾಗಿದ್ದ ರಾಜು ತಾಳಿಕೋಟಿ ಅವರ ಪಾರ್ಥಿವ ಶರೀರಕ್ಕೆ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ಜ್ಯೋತಿ ಪಾಟೀಲ, ಜಿಲ್ಲಾಧಿಕಾರಿ ದಿವ್ಯ ಪ್ರಭು ಮತ್ತು ಸಿಇಓ ಭುವನೇಶ ಪಾಟೀಲ ಅವರು ಪುಷ್ಪಾರ್ಚನೆ ಮಾಡಿ, ಅಂತಿಮ ನಮನ ಸಲ್ಲಿಸಿದರು.

ಮಂಗಳವಾರ ಬೆಳಿಗ್ಗೆ ನಗರದ ರಂಗಾಯಣದಲ್ಲಿ ದಿ. ರಾಜು ತಾಳಿಕೋಟಿ ಅವರ ಪಾರ್ಥಿವ ಶರೀರದ ಸಾರ್ವಜನಿಕ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ರಂಗಭೂಮಿ ಕಲಾವಿದರು, ಅಭಿಮಾನಿಗಳು ಹಾಗೂ ಸಾಂಸ್ಕೃತಿಕ ಕ್ಷೇತ್ರದ ಅನೇಕ ಗಣ್ಯರು, ಸಾರ್ವಜನಿಕರು ದಿ. ರಾಜು ತಾಳಿಕೋಟಿ ಅವರಿಗೆ ಅಂತಿಮ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಧಾರವಾಡದ ವಿವಿಧ ರಾಷ್ಟ್ರೀಯ ಟ್ರಸ್ಟ್‌ಗಳ ಅಧ್ಯಕ್ಷರು, ಸದಸ್ಯರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬೆಳಗಾವಿ ವಿಭಾಗದ ಜಂಟಿ ನಿರ್ದೇಶಕ ಕೆ.ಎಚ್. ಚನ್ನೂರ, ಧಾರವಾಡ ರಂಗಾಯಣದ ಆಡಳಿತಾಧಿಕಾರಿ ಶಶಿಕಲಾ ಹುಡೇದ, ತಹಸೀಲ್ದಾರ ಡಾ. ಡಿ.ಎಚ್. ಹೂಗಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ರಂಗಾಯಣದ ಎಲ್ಲ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಗಾಝಾ ಕದನ ವಿರಾಮ ಒಪ್ಪಂದಕ್ಕೆ ಸಹಿ ಹಾಕಿದ ಟ್ರಂಪ್ : ಮಧ್ಯಪ್ರಾಚ್ಯದಲ್ಲಿ ಶಾಶ್ವತ ಶಾಂತಿಯ ಭರವಸೆ

■ **ವಿಜಯಸಾಕ್ಷಿ ಸುದ್ದಿ, ಗಾಝಾ**

ಎರಡು ವರ್ಷಗಳ ನರಮೇಧದ ಬಳಿಕ, ಕತಾರ್, ಈಜಿಪ್ಟ್ ಮತ್ತು ಟರ್ಕಿಯ ನಾಯಕರೊಂದಿಗೆ ಸೋಮವಾರ (ಅ.13) ಗಾಝಾ ಕದನ ವಿರಾಮ ಒಪ್ಪಂದಕ್ಕೆ ಸಹಿ ಹಾಕಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಮಧ್ಯಪ್ರಾಚ್ಯದಲ್ಲಿ ಶಾಶ್ವತ ಶಾಂತಿಯ ಭರವಸೆ ನೀಡಿದ್ದಾರೆ.

ಈಜಿಪ್ಟ್‌ನ ಶರ್ಮ್ ಅಲ್-ಶೇಖ್‌ನಲ್ಲಿ ನಡೆದ 'ಗಾಝಾ ಶಾಂತಿ ಶೃಂಗ'ದಲ್ಲಿ ಕದನ ವಿರಾಮ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ವಿವಿಧ ರಾಷ್ಟ್ರಗಳ 25ಕ್ಕೂ ಹೆಚ್ಚು ಪ್ರಮುಖ ನಾಯಕರು ಈ ಶೃಂಗಸಭೆಯಲ್ಲಿ ಭಾಗವಹಿಸಿದ್ದರು. ಸಭೆಯ ಬಳಿಕ ಮಾತನಾಡಿದ ಟ್ರಂಪ್, "ಇವತ್ತಿನ ದಿನ ಮಧ್ಯಪ್ರಾಚ್ಯಕ್ಕೆ ಮಾತ್ರವಲ್ಲ, ಇಡೀ ಜಗತ್ತಿಗೆ ಅದ್ಭುತವಾದ ದಿನ' ಎಂದು ಹೇಳಿದ್ದಾರೆ.

### ರಾಷ್ಟ್ರೀಯ ಮಿಷನ್ ಅಡಿ ನೈಸರ್ಗಿಕ ಕೃಷಿಯಲ್ಲಿ ಸಮುದಾಯ ಸಂಪನ್ಮೂಲ ವ್ಯಕ್ತಿಗಳಿಗೆ (ಕೃಷಿ ಸಖಿ) ತರಬೇತಿ

# ನೈಸರ್ಗಿಕ ಕೃಷಿಯನ್ನು ಉತ್ತೇಜಿಸಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ರೈತರಿಗೆ ನೈಸರ್ಗಿಕ ಕೃಷಿ ತಾಂತ್ರಿಕತೆಗಳನ್ನು ವರ್ಗಾವಣೆ ಮಾಡುವಲ್ಲಿ ಕೃಷಿ ಸಖಿಯರ ಪಾತ್ರ ಮುಖ್ಯವಾಗಿದೆ. ರೈತರು ನೈಸರ್ಗಿಕ ಕೃಷಿಯನ್ನು ಮಾಡಿ ಮಣ್ಣಿನ ಆರೋಗ್ಯವನ್ನು ಕಾಪಾಡಿ ಜನಸಾಮಾನ್ಯರಿಗೆ ವಿಷಮುಕ್ತ ಆಹಾರವನ್ನು ನೀಡಬೇಕೆಂದು ಉಪ ಕೃಷಿ ನಿರ್ದೇಶಕರಾದ ಸ್ಫೂರ್ತಿ ಜಿ.ಎಸ್ ಕರೆ ನಿಡಿದರು.

ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ ಹಾಗೂ ಕೃಷಿ ಇಲಾಖೆ ಗದಗ ಇವರ ಸಹಯೋಗದೊಂದಿಗೆ, ರಾಷ್ಟ್ರೀಯ ಮಿಷನ್ ಅಡಿ ನೈಸರ್ಗಿಕ ಕೃಷಿಯಲ್ಲಿ ಸಮುದಾಯ ಸಂಪನ್ಮೂಲ ವ್ಯಕ್ತಿಗಳಿಗೆ (ಕೃಷಿ ಸಖಿ) ಅ.13ರಿಂದ 17ರವರೆಗೆ



ಹಮ್ಮಿಕೊಂಡಿರುವ ಐದು ದಿನಗಳ ತರಬೇತಿ ಕಾರ್ಯಕ್ರಮವನ್ನು ಸೋಮವಾರ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕೃಷಿ ವಿಸ್ತರಣಾ ಕಾರ್ಯಕರ್ತರಾಗಿ ತಮ್ಮ ಗ್ರಾಮದಲ್ಲಿ ರೈತರಿಗೆ ನೈಸರ್ಗಿಕ ಕೃಷಿಯ ಕುರಿತು ಮಾಹಿತಿ ವರ್ಗಾವಣೆ ಮಾಡಿ ಹೆಚ್ಚಿನ ಸಂಖ್ಯೆಯಲ್ಲಿ ರೈತರು ನೈಸರ್ಗಿಕ ಕೃಷಿಯನ್ನು ಮಾಡಲು ಪ್ರೇರಣೆಯನ್ನು ನೀಡಬೇಕೆಂದು ಅವರು ತಿಳಿಸಿದರು.

ಹಿರಿಯ ವಿಜ್ಞಾನಿಗಳು ಹಾಗೂ ಐ.ಸಿ.ಎ.ಆರ್-ಕೆ. ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ಮಂಕಣಿ ಮಾತನಾಡಿ, ನೈಸರ್ಗಿಕ ಕೃಷಿ ತರಬೇತಿಯು ಒಂದು ವಿಶೇಷ ತರಬೇತಿಯಾಗಿದ್ದು, ಈ ನಿಟ್ಟಿನಲ್ಲಿ ಕೃಷಿ ಸಖಿಯರು ರೈತರಿಗೆ ನೈಸರ್ಗಿಕ ಕೃಷಿ ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡಿ, ನೈಸರ್ಗಿಕ ಕೃಷಿಯ ಮಹತ್ವವನ್ನು ರೈತರಿಗೆ ತಿಳಿಸಬೇಕು. ತಮಗೆ ಹೆಚ್ಚಿನ ಮಾಹಿತಿ ಬೇಕಾದಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳನ್ನು ಸಂಪರ್ಕಿಸಬೇಕೆಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ನೈಸರ್ಗಿಕ ಕೃಷಿ ತರಬೇತಿ ಕೈಪಿಡಿಯನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ನಾರಾಯಣ ಭಂಡಿ, ವಿಜ್ಞಾನಿಗಳು (ಮಣ್ಣು ವಿಜ್ಞಾನ), ಅತಿಥಿಗಳನ್ನು ಸ್ವಾಗತಿಸಿದರು. ಹೇಮಾವತಿ ಹಿರೇಗೌಡರ, (ತೋಟಗಾರಿಕೆ ವಿಜ್ಞಾನಿಗಳು) ಕಾರ್ಯಕ್ರಮ ನಿರೂಪಿಸಿದರು.ಡಾ. ಚೇತನ ಬಾಬು ಆರ್.ಟಿ. (ಬೇಸಾಯ ಶಾಸ್ತ್ರ ವಿಜ್ಞಾನಿಗಳು) ವಂದಿಸಿದರು.

> ನೈಸರ್ಗಿಕ ಕೃಷಿಯ ಪರಿಕರಗಳ ತಯಾರಿಕೆಯ ಪ್ರಾತ್ಯಕ್ಷಿಕೆ ಹಾಗೂ ಅವುಗಳ ಮಹತ್ವ, ಮಣ್ಣಿನಲ್ಲಿರುವ ಪೋಷಕಾಂಶಗಳು, ಸಾವಯವ ಪರಿಕರಗಳು, ಹೈನು ದನಗಳ ಪೋಷಣೆ, ನೈಸರ್ಗಿಕ ಕೃಷಿಯಲ್ಲಿ ತೋಟಗಾರಿಕೆ ಹಾಗೂ ಪ್ರಗತಿಪರ ರೈತರಿಂದ ಅನುಭವ ಹಂಚಿಕೆ ಹಾಗೂ ಧಾರವಾಡ ಕೃಷಿ ವಿಶ್ವ ವಿದ್ಯಾಲಯದ ನೈಸರ್ಗಿಕ ಘಟಕಕ್ಕೆ ಕ್ಷೇತ್ರ ಭೇಟಿ ಈ ತರಬೇತಿಯ ವಿಶೇಷವಾಗಿದೆ.

## ದರ ಕುಸಿತ; ಈರುಳ್ಳಿ ಹರಗಿದ ರೈತ



■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಮಾರುಕಟ್ಟೆಯಲ್ಲಿ ಈರುಳ್ಳಿ ದರ ಕುಸಿತ ಕಂಡಿದ್ದರಿಂದ ಜಮೀನಿನಲ್ಲಿ ಕಳೆದ ಒಂದು ತಿಂಗಳಿಂದ ಕಿತು ಹಾಕಿದ್ದ ಈರುಳ್ಳಿ ಫಸಲನ್ನು ಇಲ್ಲಿಯ ರೈತನೊಬ್ಬ ಹರಗಿ ತನ್ನ ನೋವನ್ನು ತೋಡಿಕೊಂಡಿದ್ದಾನೆ.

ಇಲ್ಲಿಯ ಪಾಪನಾಶಿ ರಸ್ತೆಗೆ ಹೊಂದಿರುವ ಎರಡು ಎಕರೆ ಜಮೀನಿನಲ್ಲಿ ಈರಳ್ಳಿ ಬೆಳೆದಿದ್ದ ರೈತ ಕರಿಯಪ್ಪ ತಿಮ್ಮಾಪೂರ ದರ ಕುಸಿತದಿಂದ ಟ್ರ್ಯಾಕ್ಟರ್ ಮೂಲಕ ಹರಗಿ ಜಮೀನಿನಲ್ಲಿ ಗೊಬ್ಬರವಾಗಲು ಬಿಟ್ಟಿದ್ದಾನೆ. ಇದಕ್ಕೂ ಪೂರ್ವ ಕಿತ್ತುಹಾಕಿರುವ ಉಳ್ಳಾಗಡ್ಡಿಯನ್ನು ಕುರಿ ಮೇಯಲು ಬಿಟ್ಟಿದ್ದನ್ನು ನೋಡಿ ರೈತನಿಗೆ ಆಗಿರುವ ನಷ್ಟ ಕಂಡು ರಸ್ತೆಯಲ್ಲಿ ಹೋಗುವವರು ಮಮ್ಮಲ ಮರುಗಿದ್ದಾರೆ.

ಉಳುಮೆ, ಬೀಜ, ಗೊಬ್ಬರ, ಔಷಧಿ, ಆಳು ಸೇರಿ 75 ಸಾವಿರ ರೂ ಖರ್ಚು ಮಾಡಿರುವ ರೈತ ದರ ಕುಸಿತದಿಂದ ಫಸಲನ್ನು ಹರಗಿದ್ದಾನೆ. ಮಾರುಕಟ್ಟೆಯಲ್ಲಿ ಈಗ ಕ್ವಿಂಟಲ್‌ಗೆ 200-300 ರೂ ಮಾತ್ರ ದರವಿದೆ. ಕಿತ್ತು ಹಾಕಿರುವ ಈರುಳ್ಳಿಯನ್ನು ರಾಶಿ ಮಾಡಿ ಚೀಲ ತುಂಬಿ ಮಾರುಕಟ್ಟೆಗೆ ಹೋದರೆ ನಷ್ಟವೇ ಅಧಿಕವಾಗುತ್ತದೆ ಎಂಬುದನ್ನು ಅರಿತು ಜಮೀನಿನಲ್ಲಿಯೇ ಗೊಬ್ಬರವನ್ನಾಗಿ ಮಾಡಲು ಹರಗಿದ್ದೇನೆ. ಆದ್ದರಿಂದ ಸರಕಾರ ಪರಿಹಾರ ನೀಡಬೇಕೆಂದು ರೈತ ಕರಿಯಪ್ಪ ತಿಮ್ಮಾಪೂರ, ಸುರೇಶ ಅಬ್ಬಿಗೇರಿ ಒತ್ತಾಯಿಸಿದ್ದಾರೆ.

## ಶರಣಬಸಪ್ಪ ಗುಡಿಮನಿಯವರಿಗೆ ಸನ್ಮಾನ



■ **ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಗೌರಿಗುಡಿ ಓಣಿಯ ವೀರಶೈವ ಸಮಾಜದ ಉಪಾಧ್ಯಕ್ಷ ಶರಣಬಸಪ್ಪ (ರಾಜು) ಗುಡಿಮನಿ ಅವರು ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ನಿಮಿತ್ತ ಗೌರಿಗುಡಿ ಓಣಿಯ ವೀರಶೈವ ಸಮಾಜದ ಅಧ್ಯಕ್ಷ ಕಾಶಣ್ಣ ಕುಂದಗೋಳ ಅವರ ಅಧ್ಯಕ್ಷತೆಯಲ್ಲಿ ಸನ್ಮಾನಿಸಲಾಯಿತು.

ಸಭೆಯಲ್ಲಿ ನಿರ್ದೇಶಕರಾದ ಶಿವಪುತ್ರಪ್ಪ ಬೆಂತೂರ, ಮರಿಯಪ್ಪ ಅವರಾಧಿ, ಶಿವಾನಂದ ನಾಗರಾಳ, ಬಸವರಾಜ ಕುಂದಗೋಳ, ಶರಣಪ್ಪ ಅಣ್ಣಿಗೇರಿ, ಸತೀಶ ಕುಂದಗೋಳ, ಉಮೇಶ ಅರಮನಿ, ಸುಭಾಷ ಮಳಗಿ, ಅಜಯ ಕುಂದಗೋಳ, ಸಿದ್ದು ಕುಂದಗೋಳ ಉಪಸ್ಥಿತರಿದ್ದರು ಎಂದು ವೀರಶೈವ ಸಮಾಜದ ಕಾರ್ಯದರ್ಶಿ ಸಿದ್ದಲಿಂಗೇಶ್ವರ ಮುಳ್ಳಾಳ ತಿಳಿಸಿದ್ದಾರೆ.

# ರುದ್ರಭೂಮಿ ಸುಧಾರಣೆಗೆ ದೇಣಿಗೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಹೊರವಲಯದಲ್ಲಿರುವ ವೀರಶೈವ ಲಿಂಗಾಯತ ರುದ್ರಭೂಮಿ ಸಮಿತಿಯವರಿಗೆ ಶ್ರೀ ಮಹಾಲಕ್ಷ್ಮೀ ದೇವಸ್ಥಾನ, ಶ್ರೀ ಮಾರುತಿ ದೇವಸ್ಥಾನ ಗವಳಿ ಸಮಾಜ ಟ್ರಸ್ಟ್ ವತಿಯಿಂದ ರುದ್ರಭೂಮಿ ಸುಧಾರಣೆಗಾಗಿ 51 ಸಾವಿರ ರೂಪಾಯಿಗಳ ಚೆಕ್‌ನ್ನು ತ್ರಿವಿಧ ದಾಸೋಹಿ ಶ್ರೀ ಸಿದ್ಧರಾಮ ಮಹಾಸ್ವಾಮಿಗಳು ತೋಂಟ-ದಾರ್ಯ ಮಠ ಗೌರವಾಧ್ಯಕ್ಷರು, ಅಧ್ಯಕ್ಷರಾದ ವಿನಾಯಕ ಮಾನ್ವಿ, ಕಾರ್ಯದರ್ಶಿಗಳಾದ ಕೆ.ಎಸ್. ಚೆಟ್ಟಿಯವರಿಗೆ ಚೆಕ್ ನೀಡಿದರು.

ಚೆಕ್ ಸ್ವೀಕರಿಸಿ ವಿನಾಯಕ ಮಾನ್ವಿ ಮಾತನಾಡಿ, ತ್ರಿವಿಧ ದಾಸೋಹಿ ಪೂಜ್ಯ ಶ್ರೀ ಸಿದ್ಧರಾಮ ಮಹಾಸ್ವಾಮಿಗಳ ನೇತೃತ್ವದಲ್ಲಿ ಈಗಾಗಲೇ ರುದ್ರಭೂಮಿಯಲ್ಲಿ ಮೂಲಭೂತ ಸೌಕರ್ಯಗಳಾದ ಬೀದಿದೀಪ, ವಾಹನ ನಿಲುಗಡೆ ಸ್ಥಳ, ನೀರಿನ ವ್ಯವಸ್ಥೆ, ರುದ್ರಭೂಮಿ ಕಂಪೌಂಡ್ ಮೇಲೆ ತಂತಿ ಬೇಲಿ ಕಾಮಗಾರಿ ಪ್ರಗತಿಯಲ್ಲಿದ್ದು, ಈ ರುದ್ರಭೂಮಿಯಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುತ್ತಿದೆ. ಇದನ್ನು ಮನಗಂಡು ಶ್ರೀ ಮಹಾಲಕ್ಷ್ಮೀ ದೇವಸ್ಥಾನ, ಶ್ರೀ ಮಾರುತಿ ದೇವಸ್ಥಾನ ಗವಳಿ ಸಮಾಜ ಟ್ರಸ್ಟ್, ಸಮಾಜದ ಹಿರಿಯರು ಒಂದೆಡೆ ಸೇರಿ ಹೆಚ್ಚು ಆಸಕ್ತಿಯಿಂದ ರುದ್ರಭೂಮಿ ಸುಧಾರಣೆಗಾಗಿ ಪುನಃ 51 ಸಾವಿರ ರೂಪಾಯಿಗಳ ಸಹಾಯ ಮಾಡಿದ್ದು ಶ್ಲಾಘನೀಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗೌಳಿ ಸಮಾಜದ ಹಿರಿಯರು, ಮುಖಂಡರು ಹಾಗೂ ಶಿವಯ್ಯ ನಾಲ್ವತವಾಡಮಠ ಸೇರಿದಂತೆ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

## ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದಾರೆ

■ **ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಅಂಬೇಡ್ಕರರು ನೀಡಿರುವ ಸಂವಿಧಾನದಿಂದ ದೇಶದಲ್ಲಿ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಸಾಧ್ಯವಾಗಿದೆ ಎಂದು ಖ್ಯಾತ ಸಾಹಿತಿ ಆರತಿ ಎಚ್.ಎನ್ ತಿಳಿಸಿದರು.

ಹರಪನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಖ್ಯಾತ ಲೇಖಕಿ ಕಮಲಾ ಹಂಪನಾರವರವ ಪುತ್ರಿ, ಸಾಹಿತಿ ಆರತಿ ಎಚ್.ಎನ್ ಹಾಗೂ ರಾಜ್ಯ ವಾಲ್ಮೀಕಿ ಪ್ರಶಸ್ತಿ ಪುರಸ್ಕೃತ ಕೆ.ಉಚ್ಚಂಗೆಪ್ಪನವರಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು. ಕೆ. ಉಚ್ಚಂಗೆಪ್ಪ ಮಾತನಾಡಿ, ಸಾಹಿತಿ ಆರತಿಯವರು ಬಹುಮುಖ ಪ್ರತಿಭೆಯಾಗಿದ್ದಾರೆ.



ಸಮಾಜದಲ್ಲಿ ಎಲೆಮರೆಯ ಕಾಯಿಯಂತೆ ಉಳಿದ ಸಾಧಕರನ್ನು ದೂರದರ್ಶನ ವಾಹಿನಿಯ ಬೆಳಕು ಕಾರ್ಯಕ್ರಮದ ಮೂಲಕ ಮುಖ್ಯವಾಹಿನಿಗೆ ತರುವ ಕೆಲಸ ಮಾಡುತ್ತಿದ್ದಾರೆ ಎಂದರು.

ಪುರಸಭೆ ಮಾಜಿ ಅಧ್ಯಕ್ಷ ಎಚ್. ಕೆ. ಹಾಲೇಶ್ ಮಾತನಾಡಿ, ಸಾಹಿತಿ ಆರತಿಯವರು ತಾಯಿಯವರಂತೆಯೇ ಸಾಮಾಜಿಕ ಕಳಕಳಿಯ, ಸಮಾಜದ ಪರಿವರ್ತನೆ ಮಾಡುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು. ವಿಜಯನಗರ ಜಿಲ್ಲಾ ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ವೈ.ಡಿ. ಅಣ್ಣಪ್ಪ, ಪ್ರಗತಿಪರ ಚಿಂತಕ ಕೋಡಿಹಳ್ಳಿ ಭೀಮಪ್ಪ, ಕಸಾಪ ಮಾಜಿ ಅಧ್ಯಕ್ಷೆ ಸುಭದ್ರಮ್ಮ, ಇಸ್ಮಾಯಿಲ್ ಎಲಿಗಾರ್, ರಾಜಶ್ರೀ ಮಾತನಾಡಿದರು.

ಈ ವೇಳೆ ಸಣ್ಣ ಹಾಲಸ್ವಾಮಿ ಹರಪನಹಳ್ಳಿ, ಮುಖಂಡರಾದ ಎಚ್.ಬಿ. ಪರಶುರಾಮಪ್ಪ, ಆರ್ ಲೋಕೇಶ್, ಬಿ.ಎಚ್. ಬಸರಾಜಪ್ಪ, ಮುತ್ತಿಗಿ ಜಂಬಣ್ಣ, ಚಿಗಟೇರಿ ಜಂಬಣ್ಣ, ರೇವಣಸಿದ್ದಪ್ಪ, ಎಚ್.ಕೆ. ಮಂಜುನಾಥ, ಎಚ್.ಕೆ. ರೇಖಾ, ಅಂಜಿನಪ್ಪ, ಎಚ್. ಕೆ. ವರುಣ್, ಮತ್ತಿಹಳ್ಳಿ ಬೆಟ್ಟನಗೌಡ, ಹಾಲೇಶ್ ನಾಯ್ಕ, ವಾಗೀಶ್, ವಕೀಲ ಅಹ್ಮದ್, ಗಿಡ್ಡಳ್ಳಿ ನಾಗರಾಜ, ಪಿ. ಪರಶುರಾಮ್, ಜಗದೀಶ್, ಪ್ರಕಾಶ್ ನಾಯ್ಕ ಮುಂತಾದವರಿದ್ದರು.

### ಜಿಲ್ಲಾ ಕಸಾಪದಿಂದ ಗಿರೋಸಾ ಬದಿ, ಯಲ್ಲಪ್ಪ ಬದಿ ದತ್ತಿ ಉಪನ್ಯಾಸ

# ಕನ್ನಡ ಸಾಹಿತ್ಯಕ್ಕೆ ಕಂಬಾರರ ಕೊಡುಗೆ ಅಪಾರ




■ **ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಪರಿಸರದ ಸಮಗ್ರ ಚಿತ್ರಣವನ್ನು ಚಂದ್ರಶೇಖರ ಕಂಬಾರರ ಕಾವ್ಯ ಮತ್ತು ನಾಟಕಗಳಲ್ಲಿ ಕಾಣಬಹುದಾಗಿದೆ. ಕನ್ನಡ ಜಾನಪದ ಪರಂಪರೆಯನ್ನು ಸಮರ್ಥವಾಗಿ ಬಳಸಿಕೊಂಡು ಪ್ರಸ್ತುತ ದಿನಮಾನದ ಎಲ್ಲ ಸಮಸ್ಯೆಗಳಿಗೆ ಪರಿಹಾರ ಸೂಚಿಸುವ ರೀತಿಯಲ್ಲಿ ತಮ್ಮ ಕೃತಿಗಳನ್ನು ರಚಿಸಿದ್ದಾರೆ ಎಂದು ಎಚ್.ಎನ್. ಕಾಳೆ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಗದುಗಿನ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕ.ಸಾ.ಪ ಕಾರ್ಯಾಲಯದಲ್ಲಿ ದಿ. ಗಿರೋಸಾ ಬದಿ ಹಾಗೂ ದಿ. ಎಲ್ಲೂಬಾಯಿ ಬದಿ ಇವರ ಸ್ಮರಣಾರ್ಥ ಜರುಗಿದ ದತ್ತಿ ಉಪನ್ಯಾಸದಲ್ಲಿ ಚಂದ್ರಶೇಖರ ಕಂಬಾರ ಅವರರ ಕೊಡುಗೆ ಕುರಿತು ಮಾತನಾಡಿದರು.

ಬೇಂದ್ರೆ ಅವರ ನಂತರ ಉತ್ತರ ಕರ್ನಾಟಕದ ಭಾಷೆಯನ್ನು ಸಮರ್ಥವಾಗಿ ತಮ್ಮ ಕೃತಿಗಳಲ್ಲಿ ದುಡಿಸಿಕೊಂಡುವರು ಕಂಬಾರರು. ಕನ್ನಡ ನಾಟಕಕ್ಕೆ ತಮ್ಮ ಕೃತಿಗಳ ಮೂಲಕ ಹೊಸ ಪ್ರವಾಹವನ್ನು ತಂದರು. ಕಾವ್ಯ, ಕಾದಂಬರಿ ಕ್ಷೇತ್ರದಲ್ಲೂ ಅಮೋಘ ಕೊಡುಗೆ ನೀಡುವ ಮೂಲಕ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ ಎಂದು ತಿಳಿಸಿದರು.

ದತ್ತಿ ದಾನಿಗಳು ಹಾಗೂ ರಾಜ್ಯ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರಾದ ರತ್ನಾ ಗಿರೋಸಾ ಬದಿ ಮಾತನಾಡಿ, ವ್ಯಕ್ತಿಯ ಜೀವನದ ಉನ್ನತಿಗೆ ತಂದೆ-ತಾಯಿಗಳ ಕೊಡುಗೆ ಅಪಾರವಾದುದು. ಅವರ ತ್ಯಾಗ, ಪ್ರೀತಿಯ ಫಲವಾಗಿ ಉತ್ತಮ ಬದುಕು ನಿರ್ವಹಿಸಲು ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ಗಿರೋಸಾ ಹಾಗೂ ಯಲ್ಲಮ್ಮ ಬದಿ ಅವರು ಜೀವನ ಮಾದರಿಯಾಗಿದೆ ಎಂದು ತಿಳಿಸಿದರು.

> ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕಂಬಾರರು ವಸಾಹತುಶಾಹಿ ವಿರೋಧಿ ನೆಲೆಯ ತಮ್ಮ ನಾಟಕಗಳಿಗೆ ಜನಪದದ ಎಲ್ಲ ಸತ್ವವನ್ನು ತುಂಬಿ ರಂಗಭೂಮಿಗೆ ಹೊಸ ಚೈತನ್ಯವನ್ನು ತಂದರು. ಚಲನಚಿತ್ರ ನಿರ್ದೇಶಕರಾಗಿ, ಹಾಡುಗಾರರಾಗಿ, ಸಂಸ್ಥೆಗಳ ಮುಖ್ಯಸ್ಥರಾಗಿ, ರಾಜಕೀಯ, ಸಾಮಾಜಿಕ ರಂಗದಲ್ಲೂ ವಿಶಿಷ್ಠ ಕೊಡುಗೆಯನ್ನು ನೀಡಿ ಕನ್ನಡ ನೆಲದ ಶ್ರೀಮಂತಿಕೆಗೆ ಕಾರಣರಾಗಿದ್ದಾರೆ ಎಂದು ತಿಳಿಸಿದರು.

ಶಿರಹಟ್ಟಿ ತಾಲೂಕಾ ಕಸಾಪ ಅಧ್ಯಕ್ಷ ನವೀನ ಅಳವಂಡಿ, ಎಲ್ಲೋಸಾ ಬದಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ಕಾರ್ಯದರ್ಶಿ ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಡಿ.ಎಸ್.ಬಾಪುರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ಅನ್ನದಾನಿ ಹಿರೇಮಠ, ರಾಹುಲ ಗಿಡ್ನಂದಿ, ಶೇಖರಪ್ಪ ಕಳಸಾಪೂರಶೆಟ್ಟರ, ಬಿ.ಎಸ್. ಹಿಂಡಿ, ಬಿ.ಬಿ. ಹೊಳಗುಂದಿ, ಎಂ.ಎಫ್. ದೋಣಿ, ಶೈಲಾ ಗಿಡ್ನಂದಿ, ರಾಜಶೇಖರ ಕರಡಿ, ರತ್ನಕ್ಕ ಪಾಟೀಲ, ಎಸ್.ಎಂ. ಕಾತರಕಿ, ಶಶಿಕಾಂತ ಕೊರ್ಲಹಳ್ಳಿ, ರಾಮಚಂದ್ರ ಮೋನೆ, ಎಸ್.ಎಲ್. ಕುಲಕರ್ಣಿ, ಸಿ.ಎಂ. ಮಾರನಬಸರಿ, ರತ್ನಾಬಾಯಿ ಪುರಂತರ, ಗಿರೀಶ ಪಂತರ, ಗಂಗಮ್ಮ ಮುದಗಲ್, ಜೆ.ಎ. ಪಾಟೀಲ, ರಾಜು ಕಲಬುರ್ಗಿ, ಆನಂದ ಕಲ್ಮಠ, ರಮೇಶ ಹುಲಕುಂದ, ಎಸ್. ಎಸ್. ದೇಶಪಾಂಡೆ, ಎಸ್.ಬಿ. ಹೊಸೂರ, ಉಮಾ ಕಣವಿ, ಸುರೇಶ ಕುಂಬಾರ, ರವಿ ದೇವರಡ್ಡಿ ಎಸ್.ಎಸ್. ಚಾಟಗೇರಿ, ಎಸ್.ವಿ. ಕುಂದಗೋಳ, ಪಿ.ವಿ. ಇನಾಮದಾರ, ಆರ್.ಬಿ. ಬದಿ, ಜನಕ ಕಲಬುರ್ಗಿ, ನಂದಾ ಎಂ.ಕೆ., ರಾಜೇಶ್ವರಿ ಬಡ್ನಿ, ಮಧುಮತಿ ಮಹಿರಾಜಪೇಟ, ಎಸ್.ಬಿ. ಪಾಟೀಲ, ಅನಸೂಯಾ ಮಿಟ್ಟಿ, ಆರ್.ಡಿ. ಕಪ್ಪಲಿ, ಅಮರೇಶ ರಾಂಪೂರ, ಸತೀಶ ಚನ್ನಪ್ಪಗೌಡ್ರ ಮೊದಲಾದವರು ಭಾಗವಹಿಸಿದ್ದರು.

## 'ಶಿ ಈಸ್ ಮೈ ಲವ್' ಚಿತ್ರೀಕರಣ ಆರಂಭ



■ **ವಿಜಯಸಾಕ್ಷಿ ಸುದ್ದಿ, ಮೈಸೂರು**

ಕ್ರಿಯೇಟಿವ್ ಕಾನ್ಸೆಪ್ಟ್ಸ್ ಬೆಂಗಳೂರು ಬ್ಯಾನರ್ ಅಡಿ ಮೈಸೂರಿನ ಅಗ್ರಹಾರದ ಶ್ರೀಕೃಷ್ಣ ದೇವಸ್ಥಾನದಲ್ಲಿ 'ಶಿ ಈಸ್ ಮೈ ಲವ್' ಚಲನಚಿತ್ರದ ಚಿತ್ರೀಕರಣ ಮುಹೂರ್ತ ನೆರವೇರಿತು.

ಅತಿಥಿಗಳಾಗಿ ಆಗಮಿಸಿದ್ದ ಶಾಸಕರಾದ ಟಿ.ಎಸ್. ವತ್ಸ ಅವರು ಕ್ಯಾಮರಾ ಗುಂಡಿ ಒತ್ತುವ ಮೂಲಕ ಚಿತ್ರೀಕರಣಕ್ಕೆ ಚಾಲನೆ ನೀಡಿ, ಚಿತ್ರೀಕರಣ ಯಶಸ್ವಿಯಾಗಿ ನಡೆದು ಉತ್ತಮ ಪ್ರದರ್ಶನ ಕಾಣಲಿ ಎಂದು ಶುಭ ಹಾರೈಸಿದರು. ಚಲನಚಿತ್ರ ನಿರ್ಮಾಪಕ ಎಂ.ಡಿ. ಪಾರ್ಥಸಾರಥಿ, ನಿರ್ಮಾಪಕ-ನಿರ್ದೇಶಕ ಲೋಕೇಶ್ ವಿದ್ಯಾಧರ ಆಗಮಿಸಿ ಚಿತ್ರತಂಡಕ್ಕೆ ಶುಭ ಕೋರಿದರು.

ಮಾತುಕತೆಗಳಿಲ್ಲದೇ ಆಂಗಿಕ ಸಂಜ್ಞೆಯ ಮೂಲಕವೇ ಸಾಗುವ ಮೂಕಿ ಚಿತ್ರ. ಈ ಚಿತ್ರದಲ್ಲಿ ನಾಯಕ ಕಿವುಡ ಹಾಗೂ ಮೂಗ. ಆತ ಒಂದು ಹುಡುಗಿಯನ್ನು ಪ್ರೀತಿಸುತ್ತಾನೆ. ಮಾತು ಬಾರದ ಹಾಗೂ ಕಿವಿ ಕೇಳದ ಹುಡುಗ ಹೇಗೆ ಪ್ರೀತಿ ಮಾಡ್ತಾನೆ, ಆ ಪ್ರೀತಿನ ಹೇಗೆ ವ್ಯಕ್ತಪಡಿಸುತ್ತಾನೆ, ಕೊನೆಗೆ ಅವಳನ್ನು ಹೇಗೆ ಮದುವೆಯಾಗುತ್ತಾನೆ ಎನ್ನುವ ಕಥಾಹಂದರ ಚಿತ್ರದಲ್ಲಿದೆ. ಮೈಸೂರಿನ ಸುತ್ತ ಮುತ್ತ 30 ದಿನಗಳ ಕಾಲ ಚಿತ್ರೀಕರಣ ನಡೆಯಲಿದೆ. ಆದಷ್ಟು ಬೇಗ ಚಿತ್ರವನ್ನು ಬಿಡುಗಡೆ ಮಾಡುತ್ತೇವೆ ಎಂದು ನಿರ್ದೇಶಕ, ನಿರ್ಮಾಪಕರಾದ ಜನಾರ್ಧನ ರಾಜು ಹೇಳಿದರು.

ತಾರಾಗಣದಲ್ಲಿ ನವೀನ, ಅಶ್ರೀತಾ, ವಾಸ್ತವ, ಅನುರಾಧ, ಅಶೀನಾ, ರಾಜಕುಮಾರ್, ಮುತ್ತುರಾಜ್, ಮಮತಾ, ಲೋಕೇಶ ವಿದ್ಯಾಧರ, ಪ್ರದೀಪ, ತನ್ಯಾ, ವೆಂಕಟೇಶ, ಮನೀಷಾ, ಮಣಿಕಂಠ, ಕೆ ಸಾಯಿ ಚೈತನ್ಯಕುಮಾರ್, ಕಿರಣ್ ಮೊದಲಾದವರಿದ್ದಾರೆ. ತಾಂತ್ರಿಕವರ್ಗದಲ್ಲಿ ಸಂಗೀತ ಸಂದೀಪ, ಪ್ರಸಾಧನ ಗೋಪಿ, ವಸ್ತ್ರಾಲಂಕಾರ ರಾಮ್‌ಬಾಬು, ಕಲಾನಿರ್ದೇಶನ ಸಾಯಿ ಕಲ್ಯಾಣಕುಮಾರ್, ಪತ್ರಿಕಾ ಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ, ಸಹನಿರ್ದೇಶನ ಪ್ರಶಾಂತ ರಾಯ್, ಪ್ರೊಡಕ್ಷನ್ ಮ್ಯಾನೇಜರ್ ಯುವರಾಜ ಇದ್ದು, ಜನಾರ್ಧನ ರಾಜು ಚಿತ್ರಕಥೆ, ಸಂಭಾಷಣೆ, ಛಾಯಾಗ್ರಹಣ, ನಿರ್ದೇಶನದ ಜೊತೆಗೆ ನಿರ್ಮಾಪಕರೂ ಆಗಿದ್ದಾರೆ.

# ಕಂದಕಕ್ಕೆ ಉರುಳಿದ ಬಸ್



■ ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರದಿಂದ ಕಲ್ಲಾಗನೂರಿಗೆ ಹೊರಟಿದ್ದ ಸಾರಿಗೆ ಬಸ್ ದೊಡ್ಡೂರು-ಸೂರಣಗಿ ನಡುವೆ ಚಾಲಕನ ನಿಯಂತ್ರಣ ತಪ್ಪಿ ಕಂದಕಕ್ಕೆ ಉರುಳಿದ ಘಟನೆ ಮಂಗಳವಾರ ಮಧ್ಯಾಹ್ನ ಜರುಗಿದ್ದು, ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡ ಮೂವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಜಿಮ್ಸ್‌ಗೆ ದಾಖಲಿಸಲಾಗಿದೆ.

ಲಕ್ಷ್ಮೇಶ್ವರ ಡಿಪೋಗೆ ಸೇರಿದ ಬಸ್ (ಕೆಎ.42, ಎಫ್.1571) ಕಲ್ಲಾಗನೂರಿಗೆ ಹೊರಟಿದ್ದು, ದೊಡ್ಡೂರು ದಾಟಿದ ನಂತರ ಏಕಾಏಕಿ ಪಾಟಾ ತುಂಡಾಗಿ ಚಾಲಕನ ನಿಯಂತ್ರಣ ತಪ್ಪಿ ರಸ್ತೆಯ ಎಡಭಾಗಕ್ಕೆ ತಿರುಗಿ ಕಂದಕ್ಕಕ್ಕೆ ಉರುಳಿದೆ. ಸುದೈವದಿಂದ ಬಸ್ ಉರುಳಿದ ಜಾಗದಲ್ಲಿ ಹೆಚ್ಚು ಗಿಡಗಂಟಿಗಳು ಇದ್ದುದರಿಂದ ಹೆಚ್ಚಿನ ಅಪಾಯ ತಪ್ಪಿದೆ. ಈ ವೇಳೆ ಬಸ್ಸಿನಲ್ಲಿ ಸುಮಾರು 25 ಜನ ಪ್ರಯಾಣಿಕರು ಇದ್ದರು ಎನ್ನಲಾಗಿದೆ. ಬಸ್ ಕಂದಕ್ಕಕ್ಕೆ ಜಾರುತ್ತಿದ್ದಂತೆ ಗಾಬರಿಗೊಂಡ ಪ್ರಯಾಣಿಕರು ತುರ್ತು ಬಾಗಿಲು ಮುರಿದು ಪಾರಾಗಲು ಮುಂದಾಗಿದ್ದಾರೆ. ಬಸ್ಸಿನಿಂದ ಜಿಗಿಯುವ ಸಂದರ್ಭದಲ್ಲಿ ಸೂರಣಗಿ ಗ್ರಾಮದ ಗಂಗವ್ವ ಲಮಾಣಿ, ಈರಪ್ಪ ಡಾಕಪ್ಪ ಲಮಾಣಿ ಮತ್ತು ಬಾಲೇಹೊಸೂರಿನ ಶಿವಪ್ಪ ಅರಕೇರಿ ಎಂಬುವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳುಗಳಿಗೆ ಲಕ್ಷ್ಮೇಶ್ವರದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಜಿಮ್ಸ್ ಆಸ್ಪತ್ರೆಗೆ ರವಾನಿಸಿದ್ದಾರೆ.

### ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ; 10ನೇ ದಿನದತ್ತ ಅಹೋರಾತ್ರಿ ಧರಣಿ

# ಪ್ರತಿಭಟನಾಕಾರರಿಂದ ಅರೆಬೆತ್ತಲೆ ಮೆರವಣಿಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿಗಳಲ್ಲಿನ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣದ ವಿರುದ್ಧ ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಹಾಗೂ ಜಿಲ್ಲಾ ಬಂಜಾರ ಸಮುದಾಯದ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಗರದ ಗಾಂಧಿ ವೃತ್ತದಲ್ಲಿ ನಡೆಯುತ್ತಿರುವ ಬೃಹತ್ ಪ್ರತಿಭಟನೆ ಹಾಗೂ ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ ಬುಧವಾರದಂದು 10ನೇ ದಿನದತ್ತ ತಲುಪಿದೆ.

ಮಂಗಳವಾರ, ಗದಗ ಜಿಲ್ಲೆಯ 72 ತಾಂಡಾಗಳ ಪೈಕಿ ನಿಗದಿತ ವೇಳಾಪಟ್ಟಿಯಂತೆ ನಭಾಪುರ, ಡೋಣಿ ತಾಂಡಾ, ಬಸಾಪುರ, ಮಾಗಡಿ, ಮಾಗಡಿ ತಾಂಡಾ, ಅದ್ರಳ್ಳಿ ತಾಂಡಾ, ಹೊಳೆಆಲೂರ ತಾಂಡಾ ಹಾಗೂ ದಿಂಡೂರ ತಾಂಡಾಗಳ ನೂರಾರು ಬಂಜಾರರು ಧರಣಿ ಸ್ಥಳಕ್ಕೆ ಆಗಮಿಸಿ ಪ್ರತಿಭಟನೆಯಲ್ಲಿ ಭಾಗವಹಿಸಿದರು.



ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಕಿತ್ತೂರು ರಾಣಿ ಚನ್ನಮ್ಮ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಅರೆಬೆತ್ತಲೆ ಮೆರವಣಿಗೆ ನಡೆಸಿ, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರಲ್ಲದೆ, ಒಳಮೀಸಲಾತಿ ವರ್ಗೀಕರಣದಲ್ಲಿ ಸರ್ಕಾರ ತಾರತಮ್ಯ ತೋರಿದ್ದು, ಬಂಜಾರ ಸಮುದಾಯದವರಿಗೆ ಘೋರ ಅನ್ಯಾಯ ಮಾಡಿದೆ ಎಂದು ಸರ್ಕಾರದ ನೀತಿಯನ್ನು ಖಂಡಿಸಿದರು.

ನಭಾಪುರ ತಾಂಡಾ, ಡೋಣಿ ತಾಂಡಾ, ಬಸಾಪುರ ತಾಂಡಾ, ಮಾಗಡಿ ತಾಂಡಾ, ಅದ್ರಳ್ಳಿ ತಾಂಡಾ, ಹೊಳೆಆಲೂರ ತಾಂಡಾ ಹಾಗೂ ದಿಂಡೂರ ತಾಂಡಾಗಳ ಬಂಜಾರ ಸಮುದಾಯದ ಮುಖಂಡರು, ನಾಯಕರು, ಕಾರಭಾರಿಗಳು ಹಾಗೂ ಹಿರಿಯರು ಪಂಚರ ನೇತೃತ್ವದಲ್ಲಿ ಹೋರಾಟದಲ್ಲಿ ಪಾಲ್ಗೊಂಡರು. ಹೋರಾಟದಲ್ಲಿ ಶಿರಹಟ್ಟಿ, ಲಕ್ಷ್ಮೇಶ್ವರ, ಮುಂಡರಗಿ, ಗದಗ, ರೋಣ, ನರಗುಂದ ಹಾಗೂ ಗಜೇಂದ್ರಗಡ ತಾಲೂಕುಗಳ ಬಂಜಾರ ಬಾಂಧವರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಶ್ರೀನಿವಾಸ್ ನಾಯಕ್, ರಮೇಶ್ ಕಾರಭಾರಿ, ಹನುಮಪ್ಪ ಲಮಾಣಿ, ಹನುಮಂತ್ ನಾಯಕ್, ರಾಜಣ್ಣ ಕಾರಭಾರಿ, ಕೆ.ಸಿ. ನಭಾಪುರ, ಐ.ಎಸ್. ಪೂಜಾರ, ಟಿ.ಡಿ. ಪೂಜಾರ, ಧನುರಾಮ ತಂಬೂರಿ, ಕೃಷ್ಣಪ್ಪ ಲಮಾಣಿ, ಸಂತೋಷ ಪವಾರ್, ಆಗ್ರಪ್ಪ ನಾಯಕ್, ಚೆನ್ನಪ್ಪ ಕಾರಭಾರಿ, ಶಿವಪ್ಪ ಲಮಾಣಿ, ಶಶಿಕುಮಾರ್ ಜಾದವ್, ರಮೇಶ್ ಪವಾರ್, ಕಿರಣ್ ರಾಠೋಡ್, ಭೀಮಪ್ಪ ನಾಯಕ್, ಭೋಜಪ್ಪ ಲಮಾಣಿ, ವಿಠ್ಠಲ್ ಕಾರಭಾರಿ, ಹಾಮಜಪ್ಪ ಬಡಿಗೇರ್, ಕುಶಾಲ್ ರಾಠೋಡ್, ಧಾಮಲಪ್ಪ ನಾಯಕ್, ಲಕ್ಷ್ಮಣ ನಾಯಕ್, ಪರಮೇಶ್ ಲಮಾಣಿ, ಲಕ್ಷ್ಮಣ ಲಮಾಣಿ, ಭೋಜಪ್ಪ ನಾಯಕ್, ದ್ಯಾಮಣ್ಣ ಕಾರಭಾರಿ, ಹರಿಯಪ್ಪ, ಉಮೇಶ್ ನಾಯಕ್, ಪರಮೇಶ್ ಕಾರಭಾರಿ, ನರಸಪ್ಪ ಡಾವ, ಶೇಖಪ್ಪ ನಾಯಕ್, ಗೆಮಪ್ಪ ಕಾರಭಾರಿ ಹಾಗೂ ಗೋವಿಂದ ಲಮಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ರವಿಕಾಂತ್ ಅಂಗಡಿ ಮಾತನಾಡಿ, ಪರಿಶಿಷ್ಟ ಜಾತಿಗಳ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣದಿಂದ ಕೊಲಂಬೊ ಸಮುದಾಯದ ಜನರಿಗೆ ಭಾರೀ ಅನ್ಯಾಯವಾಗಿದೆ. ದಮನಿತರನ್ನು ಮುಖ್ಯವಾಹಿನಿಗೆ ತರಬೇಕಾದ ಸರ್ಕಾರಗಳು ಅವರನ್ನು ಮತ್ತೆ ಮುಖ್ಯವಾಹಿನಿಯಿಂದ ದೂರಕ್ಕೆ ತಳ್ಳಿವೆ. ಸರ್ಕಾರವು ಒಳಮೀಸಲಾತಿ ವರ್ಗೀಕರಣ ಮಾಡುವಾಗ ನಿಜವಾದ ಸಾಮಾಜಿಕ ಹಾಗೂ ಆರ್ಥಿಕ ಪರಿಸ್ಥಿತಿಯನ್ನು ಪರಿಗಣಿಸದೇ, ರಾಜಕೀಯ ಒತ್ತಡದಡಿ ತೀರ್ಮಾನ ಕೈಗೊಂಡಿದೆ. ನಾವು ಪ್ರತಿದಿನ ವಿಭಿನ್ನ ರೀತಿಯ ಪ್ರತಿಭಟನೆಗಳ ಮೂಲಕ ಸರ್ಕಾರಕ್ಕೆ ಎಚ್ಚರ ನೀಡುತ್ತಿದ್ದೇವೆ. ಬಂಜಾರ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಕೂಡಲೇ ಸರಿಪಡಿಸಬೇಕು ಎಂದು ಆಗ್ರಹಿಸಿದರು.

# ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಅ.23ಕ್ಕೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಅಕ್ಟೋಬರ್ 23ರಂದು ಬೆಳಿಗ್ಗೆ 11 ಗಂಟೆಗೆ ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಹೇಳಿದರು.




ಅವರು ಮಂಗಳವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಜಯಂತಿ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಯಂತಿ ಕಾರ್ಯಕ್ರಮವನ್ನು ನಾವೆಲ್ಲರೂ ವಿಜೃಂಭಣೆಯಿಂದ ಆಚರಿಸೋಣ ಎಂದು ತಿಳಿಸಿದರು. ಕಿತ್ತೂರು ಉತ್ಸವದ ಜ್ಯೋತಿ ರಥಯಾತ್ರೆಯು ಧಾರವಾಡ ಜಿಲ್ಲೆಗೆ ಅಕ್ಟೋಬರ್ 19ರಂದು ಬೆಳಿಗ್ಗೆ 11.30 ಗಂಟೆಗೆ ಆಗಮಿಸಲಿದ್ದು, ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದಲ್ಲಿ ಕಿತ್ತೂರು ಉತ್ಸವ ಜ್ಯೋತಿಯನ್ನು ಜಿಲ್ಲಾಡಳಿತದಿಂದ ಸ್ವಾಗತಿಸಲಾಗುವುದು ಎಂದು ಹೇಳಿದರು.

# ಪಲ್ಲಕ್ಕಿ ಬಸ್ ಸೇವೆ ಸ್ವಾಗತಾರ್ಹ

■ ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಟೋಬರ್ 17ರಿಂದ ಸಿಲಿಕಾನ್ ಸಿಟಿ ಬೆಂಗಳೂರು ಹಾಗೂ ಮುದ್ರಣ ನಗರಿ ನಡುವೆ ಹೈಟೆಕ್ ಸೌಲಭ್ಯಗಳನ್ನು ಹೊಂದಿರುವ ಪಲ್ಲಕ್ಕಿ ಬಸ್ ಸೇವೆ ಪ್ರತಿನಿತ್ಯ ಪ್ರಾರಂಭವಾಗಲಿರುವುದು ಸ್ವಾಗತಾರ್ಹ. ಆದರೆ, ಗದಗ-ಬೆಟಗೇರಿ ಅವಳಿ ನಗರದಲ್ಲಿ ಪ್ರಮುಖ ಸ್ಥಳವಾದ ರೈಲು ನಿಲ್ದಾಣದಿಂದ ನಗರ ಸಂಚಾರಕ್ಕೆ ಯಾವುದೇ ಬಸ್ ಸೇವೆಗಳು ಇಲ್ಲದಿರುವುದು ಖೇದಕರ ಸಂಗತಿ ಎಂದು ಅರಿವು ಫೌಂಡೇಶನ್ ಅಧ್ಯಕ್ಷರಾದ ವಿಶ್ವನಾಥ ಶೀರಿ ಅಭಿಪ್ರಾಯಪಟ್ಟಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನಿಡಿರುವ ಅವರು, ನಸುಕಿನಿಂದ ಮುಂಜಾನೆ 10.30ರವರೆಗೆ ರಾಜ್ಯ, ಅಂತಾರಾಜ್ಯಗಳಿಂದ ಅನೇಕ ರೈಲುಗಳು ಗದಗ ನಿಲ್ದಾಣಕ್ಕೆ ಬರುತ್ತವೆ. ಆದರೆ ಖಾಸಗಿ ವಾಹನಗಳ ಸೌಲಭ್ಯವನ್ನು ಹೊರತುಪಡಿಸಿ ಸರ್ಕಾರದ ನಗರ ಸಾರಿಗೆ ಸೇವೆ ಇಲ್ಲದಿರುವುದು ಪ್ರಯಾಣಿಕರ ಅನಾನುಕೂಲಕ್ಕೆ ಕಾರಣವಾಗಿದೆ. ಖಾಸಗಿ ವಾಹನಗಳ ಸೌಲಭ್ಯವಿದ್ದರೂ, ಪ್ರಯಾಣಿಕರಿಗೆ ಆರ್ಥಿಕ ಹೊರೆಯಾಗಿದೆ. ಕೂಡಲೇ ಸಂಬಂಧಿಸಿದವರು ಈ ಬಗ್ಗೆ ಕ್ರಮ ಕೈಗೊಳ್ಳಬೇಕಿದೆ ಎಂದು ಅವರು ವಿನಂತಿಸಿದ್ದಾರೆ.

# ಸರ್ಕಾರಿ ಆವರಣಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆ ನಿಷೇಧಕ್ಕೆ ಆಗ್ರಹಿಸಿದ ಬಳಿಕ ಬೆದರಿಕೆ: ಸಚಿವ ಪ್ರಿಯಾಂಕ್ ಖರ್ಗೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಳೆದ ಎರಡು ದಿನಗಳಿಂದ ತಮ್ಮ ಫೋನ್ ರಿಂಗಣಿಸುವುದನ್ನು ನಿಲ್ಲಿಸಿಲ್ಲ, ತಮ್ಮ ಮತ್ತು ಅವರ ಕುಟುಂಬದ ವಿರುದ್ಧ ಬೆದರಿಕೆಗಳು, ಬೆದರಿಕೆಗಳು ಮತ್ತು ಅವಾಚ್ಯ ಭಾಷೆಗಳಿಂದ ತುಂಬಿದ ಕರೆಗಳು ಬಂದಿವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಐಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದ್ದಾರೆ.

ಸರ್ಕಾರಿ ಆವರಣದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಚಟುವಟಿಕೆಗಳನ್ನು ನಿಷೇಧಿಸುವಂತೆ ಕೋರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಪತ್ರದ ನಂತರ ಬೆದರಿಕೆ ಹೆಚ್ಚಾಗಿದೆ ಎಂದು ಅವರು ಹೇಳಿದರು.

ಸರ್ಕಾರಿ ಶಾಲೆಗಳು, ಸಾರ್ವಜನಿಕ ಆಟದ ಮೈದಾನ, ದೇವಾಲಯಗಳಲ್ಲಿ ಶಾಖೆಗಳು ಮತ್ತು ಸಭೆಗಳನ್ನು ನಡೆಸುವ ಮೂಲಕ ಆರ್‌ಎಸ್‌ಎಸ್ ಮಕ್ಕಳು, ಯುವಕರಲ್ಲಿ ವಿಭಜಕ ವಿಚಾರಗಳನ್ನು ಹರಡುತ್ತಿದೆ ಎಂದು ಪ್ರಿಯಾಂಕ್ ಖರ್ಗೆ ಪತ್ರದಲ್ಲಿ ಆರೋಪಿಸಿದ್ದಾರೆ. ಅಂತಹ ಕಾರ್ಯಕ್ರಮಗಳನ್ನು ಸಂವಿಧಾನಬಾಹಿರ ಮತ್ತು ರಾಷ್ಟ್ರೀಯ ಏಕತೆಯ ಮನೋಭಾವಕ್ಕೆ ವಿರುದ್ಧವೆಂದು ಕರೆದು ಅವುಗಳ ಮೇಲೆ ಸಂಪೂರ್ಣ ನಿಷೇಧ ಹೇರುವಂತೆ ಅವರು ಮುಖ್ಯಮಂತ್ರಿಯನ್ನು ಒತ್ತಾಯಿಸಿದರು.

### ಇಂಡಿಯನ್ ಪೊಲಿಟಿಕಲ್ ಕಾಂಗ್ರೆಸ್ ಪಕ್ಷದ

# ಪ್ರಥಮ ವರ್ಷದ ವಾರ್ಷಿಕೋತ್ಸವ




■ ವಿಜಯಸಾಕ್ಷಿ ಸುದ್ದಿ, ಗದಗ

ಇಂಡಿಯನ್ ಪೊಲಿಟಿಕಲ್ ಕಾಂಗ್ರೆಸ್ ಪಕ್ಷದ ಮೊದಲನೇ ವರ್ಷದ ವಾರ್ಷಿಕೋತ್ಸವವನ್ನು ಬೆಂಗಳೂರಿನ ಪಕ್ಷದ ಕಚೇರಿಯಲ್ಲಿ ಆಚರಿಸಲಾಯಿತು.

ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಇ. ಆನಂದ್ ಮಾತನಾಡಿ, ನಮ್ಮ ಪಕ್ಷ ಸ್ಥಾಪನೆಯಾಗಿ ಒಂದು ವರ್ಷ ಪೂರ್ಣಗೊಂಡಿದ್ದು, ಪಕ್ಷವನ್ನು ಇನ್ನಷ್ಟು ಬಲಿಷ್ಠಗೊಳಿಸಬೇಕಾಗಿದೆ. ಅದಕ್ಕಾಗಿ ನಾವೆಲ್ಲರೂ ಶ್ರಮಿಸೋಣ ಎಂದು ಕರೆ ನೀಡಿದರು.

ರಾಜ್ಯಾಧ್ಯಕ್ಷ ಎಸ್.ಎಸ್. ರಡ್ಡೇರ ಮಾತನಾಡಿ, ಮುಂಬರುವ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಯಲ್ಲಿ ನಮ್ಮ ಪಕ್ಷ ಸ್ಪರ್ಧೆ ಮಾಡಲು ತಯಾರಿ ನಡೆಸಿದ್ದು, ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಗೆ ಉತ್ತಮ ಅಭ್ಯರ್ಥಿಗಳನ್ನು ಆಯ್ಕೆಯನ್ನು ಮಾಡಲಾಗುವುದು. ಅಲ್ಲದೇ ಮುಂಬರುವ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳು ಸ್ಪರ್ಧಿಸುತ್ತಾರೆ ಎಂದು ಹೇಳಿದರು.

ಗ್ರೇಟರ್ ಬೆಂಗಳೂರು ಅಥಾರಿಟಿ ಚುನಾವಣೆಯ ಸಿದ್ಧತೆ ಬಗ್ಗೆ ಪಕ್ಷದ ಮುಖಂಡರೊಂದಿಗೆ ಚರ್ಚಿಸಿ, ವಲಯವಾರು ಉಸ್ತುವಾರಿಗಳನ್ನು ನೇಮಕ ಮಾಡಲಾಯಿತು. ಬೆಂಗಳೂರು ಪಶ್ಚಿಮ ವಿಭಾಗಕ್ಕೆ ಉಮಾ, ಕೇಂದ್ರ ಜಿಬಿಎಗೆ ಮಾಧವಿ,ಉತ್ತರ ಜಿಬಿಎ ಪದ್ಮಾವತಿ, ದಕ್ಷಿಣ ವಿಭಾಗ ಶಿವಶಂಕರ್ ಅವರನ್ನು ನೇಮಕ ಮಾಡಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಕಾರ್ಮಿಕ ವಿಭಾಗದ ಅಧ್ಯಕ್ಷ ದೇವರಾಜ್,ರಾಜ್ಯ ಓಬಿಸಿ ಅಧ್ಯಕ್ಷ ಶ್ರೀನಿವಾಸ್ ಸೇರಿದಂತೆ ನೂತನವಾಗಿ ನೇಮಕವಾದ ಹಸೇನ್‌ಸಾಬ್ ಮುಲ್ಲಾ, ನೀಲಾ ಕಾಳೆ, ಮಾಧವಿ, ಪೂಜಾರಿ ಮುಂತಾದವರಿದ್ದರು.

# ಪತ್ತೆಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ



ತಳಕಲ್ ರೈಲ್ವೆ ನಿಲ್ದಾಣದಲ್ಲಿ ಓರ್ವ ಅಪರಿಚಿತ ಹೆಂಗಸು (ವಯಸ್ಸು ಸುಮಾರು 45-50 ವರ್ಷ) ಯಾವುದೋ ರೈಲುಗಾಡಿಗೆ ಸಿಕ್ಕು ಮೃತಪಟ್ಟಿದ್ದು, ಈ ಸಂಬಂಧ ಗದಗ ರೇಲ್ವೆ ಪೊಲೀಸ ಠಾಣೆ ಯುಡಿಆರ್ ನಂ-40/2025 ಕಲಂ 194 ಬಿ.ಎನ್.ಎಸ್.ಎಸ್ ರೀತ್ಯಾ ಪ್ರಕರಣ ದಾಖಲಾಗಿ ತನಿಖೆಯಲ್ಲಿದೆ. ಸದರಿ ಮೃತಳು ಅಪರಿಚಿತಳಿದ್ದು, ವಾರಸುದಾರರ ಪತ್ತೆಗಾಗಿ ರೈಲ್ವೆ ಪೊಲೀಸರು ಪ್ರಕಟಣೆ ನೀಡಿದ್ದಾರೆ.

ಮೃತಳ ಚಹರೆ: ಅಗಲವಾದ ಮುಖ, ಹಗಲವಾದ ಮೂಗು, ಸಾದಾಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ಸುಮಾರು 5 ಅಡಿ, 1 ಇಂಚು ಎತ್ತರ, ತಲೆಯಲ್ಲಿ ಸುಮಾರು 7-8 ಇಂಚಿನಷ್ಟು ಕಪ್ಪು/ಬಿಳಿ ಕೂದಲು ಬಿಟ್ಟಿರುತ್ತಾಳೆ. ಮೃತಳು ನೀಲಿ ಬ್ಲೌಸ್, ಪಿಂಕ್ ಬಣ್ಣದ ಸೀರೆ ಧರಿಸಿರುತ್ತಾಳೆ. ಸದರ ಪ್ರಕರಣದಲ್ಲಿ ಮೃತಳು ಅಪರಿಚಿತಳಿದ್ದು, ವಾರಸುದಾರರ ಪತ್ತೆಯಾದಲ್ಲಿ ಗದಗ ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ-08372-278744 ಅಥವಾ ಮೊ.ನಂ-9480802128 Email:gadagrly@ksp.gov.in ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ-080-22871291 ಇಲ್ಲಿಗೆ ತಿಳಿಸಲು ಕೋರಿದ್ದಾರೆ.

# ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಹ್ಯಾಕ್ ಫೆಸ್ಟ್




■ ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ಮತ್ತು ಕಂಪ್ಯೂಟರ್ ಸೈನ್ಸ್ ಡಿಜೈನ್ ವಿಭಾಗದ ಸಹಯೋಗದಲ್ಲಿ ಹ್ಯಾಕ್ ಫೆಸ್ಟ್ ಕೋಡಿಂಗ್ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಪ್ರಾಂಶುಪಾಲ ಡಾ. ಎಂ.ಎಂ. ಅವಟಿ ಉದ್ಘಾಟಿಸಿ ಮಾತನಾಡಿ, ಎರಡೂ ವಿಭಾಗದ ವಿದ್ಯಾರ್ಥಿಗಳನ್ನು ಮತ್ತು ಸಿಬ್ಬಂದಿಯನ್ನು ಅಭಿನಂದಿಸಿದರಲ್ಲದೆ, ಪ್ರಥಮ ವರ್ಷದಿಂದಲೇ ಕೋಡಿಂಗ್ ಮತ್ತು ಅಪ್ಲಿಕೇಶನ್ ತಯಾರಿಸುವ ಅವರ ಕಾರ್ಯಕ್ಕೆ ಸಂತಸ ವ್ಯಕ್ತಪಡಿಸಿದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ನೆಕ್ಸೆನ್ಷಿಯಲ್ ಕಂಪನಿಯ ಸಹ ಸಂಸ್ಥಾಪಕ ಮತ್ತ ಉದ್ಯಮಿಗಳಾದ ಅಭಿಷೇಕ ಬಡಿಗೇರ ಮಾತನಾಡಿ, ಪ್ರಶಸ್ತಿಗಿಂತ ಭಾಗವಹಿಸುವಿಕೆ ಮತ್ತು ಅವುಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದು ಮಹತ್ವದ್ದಾಗಿದೆ ಎಂದರು. ಪ್ರಾಸ್ತವಿಕವಾಗಿ ಮಾತನಾಡಿದ ವಿಭಾಗದ ಮುಖ್ಯಸ್ಥರಾದ ಡಾ. ರಮೇಶ ಬಡಿಗೇರ, ಹ್ಯಾಕಥಾನ್‌ಗಳು ವಿದ್ಯಾರ್ಥಿಗಳಲ್ಲಿ ತಾಂತ್ರಿಕ ಮತ್ತು ಅಭಿಯಾಂತ್ರಿಕ ಕೌಶಲ್ಯಗಳನ್ನು ಹೇಗೆ ಬೆಳೆಯಲು ಸಹಾಯ ಮಾಡುತ್ತವೆ ಎಂಬುದನ್ನು ತಿಳಿಸಿದರು.

ವೇದಿಕೆಯಲ್ಲಿ ಡಾ. ರಮೇಶ ಬಡಿಗೇರ, ಪ್ರೊ. ಸುನೀಲ ಪಾಟೀಲ, ಪ್ರೊ. ವಿಜಯಕುಮಾರ ಎಂ, ಪ್ರೊ. ಸುನೀಲ ಬೇಗಂಪುರ, ಅದಿತಿ, ಈಶಾ ಇದ್ದರು. ಭಾಗ್ಯ ಪ್ರಾರ್ಥಿಸಿದರು. ಇಶಾ ಮತ್ತು ಅದಿತಿ ವಂದಿಸಿದರು.

# ಎಂ.ಎಸ್. ಹಿರೇಮಠರಿಗೆ ಅಭಿನಂದನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಡ್ರಕಟ್ಟಿ ಗ್ರಾಮದ ವಾರ್ಡ್ ನಂ. 1ರಲ್ಲಿ ಗಣತಿದಾರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಎಂ.ಎಸ್. ಹಿರೇಮಠ ಸಾಮಾಜಿಕ ಜಾಲತಾಣದಲ್ಲಿ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯ ಕುರಿತು ವ್ಯಾಪಕ ಪ್ರಚಾರ ಮಾಡಿ ಜಾಗೃತಿ ಮೂಡಿಸುತ್ತಿರುವುದಕ್ಕೆ ಅಡ್ರಕಟ್ಟಿ ಗ್ರಾ.ಪಂ ಆಡಳಿತ ಅಧಿಕಾರಿಗಳು, ಅಧ್ಯಕ್ಷರು, ಸದಸ್ಯರು ಅಭಿನಂದಿಸಿದರು.

ಗಣತಿ ಪ್ರಾರಂಭಕ್ಕೂ ಮೊದಲು ಸಮೀಕ್ಷೆ ಹೇಗೆ ಇರುತ್ತದೆ, ಸಮೀಕ್ಷೆಗೆ ಬಂದಾಗ ಯಾವ ಯಾವ ದಾಖಲೆಗಳನ್ನು ತೋರಿಸಬೇಕು, ಯಾವ ಯಾವ ಪ್ರಶ್ನೆಗಳನ್ನು ಕೇಳುತ್ತಾರೆ ಎಂದು ನಿತ್ಯವೂ ವಾಟ್ಸಪ್, ಸ್ಟೇಟಸ್, ಫೇಸ್ಬುಕ್‌ನಲ್ಲಿ ಹಾಗೂ ತಾವು ಕರ್ತವ್ಯ ನಿರ್ವಹಿಸುತ್ತಿರುವ ಕೊಂಡಿಕೊಪ್ಪ ಗ್ರಾಮದ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರಿಗೆ ವೈಯಕ್ತಿಕವಾಗಿ ತಿಳಿಸಿದ್ದಾರೆ. ಸಮೀಕ್ಷೆಗೆ ಮೊದಲು ಹಾಗೂ ಸಮೀಕ್ಷೆ ನಡೆಯುತ್ತಿರುವಾಗ ಎಲ್ಲರೊಂದಿಗೆ ಬೆರೆತು ಸರಿಯಾದ ರೀತಿಯಲ್ಲಿ ಗಣತಿ ನಡೆಯುವಂತೆ ನೋಡಿಕೊಂಡಿದ್ದಾರೆ. ಇವರ ಕಾರ್ಯಕ್ಕೆ ಗ್ರಾ.ಪಂ ಅಧ್ಯಕ್ಷರಾದ ಪಿ.ಎಮ್. ಲಮಾಣಿ, ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ ಮಾಡಳ್ಳಿ, ಕಾರ್ಯದರ್ಶಿ ಎಸ್.ಕೆ. ಡಂಬಳ, ಮೇಲ್ವಿಚಾರಕರಾದ ಸಿ.ವಿ. ವಡಕಣ್ಣವರ ಅಭಿನಂದನೆಗಳನ್ನು ತಿಳಿಸಿದ್ದಾರೆ.

### ಡಿಜಿಟಲ್ ಗ್ರಂಥಾಲಯದ ಉಪಕೇಂದ್ರ ಉದ್ಘಾಟನೆ

# ಗ್ರಂಥಾಲಯಗಳಿಂದ ಜ್ಞಾನ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಂಥಾಲಯಗಳು ಓದುಗರ ಜ್ಞಾನ ಹೆಚ್ಚಿಸುವ ಕೇಂದ್ರಗಳಾಗಿವೆ. ಗ್ರಂಥಾಲಯ ಎಲ್ಲಿ ಇರುತ್ತದೆಯೋ ಅಲ್ಲಿ ಜ್ಞಾನಕ್ಕೆ ಹೆಚ್ಚಿನ ಮಹತ್ವವಿರುತ್ತದೆ. ಗ್ರಂಥಾಲಯಗಳ ಸದುಪಯೋಗ ಮಾಡಿಕೊಳ್ಳುವದಕ್ಕೆ ಯುವಪೀಳಿಗೆ ಮುಂದಾಗಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.



ಅವರು ಸಮೀಪದ ಶಿಗ್ಲಿ ಗ್ರಾಮದಲ್ಲಿ ಸೋಮವಾರ ಗ್ರಂಥಾಲಯ ಡಿಜಿಟಲ್ ರೂಪದ 'ಅರಿವು' ಉಪಕೇಂದ್ರ ಉದ್ಘಾಟನಾ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದರು.


ಕ್ಷೇತ್ರ ವ್ಯಾಪ್ತಿಯ ಬಹುತೇಕ ಗ್ರಾಮ ಪಂಚಾಯಿತಿಗಳಲ್ಲಿ ಗ್ರಂಥಾಲಯ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ. ಈಗಾಗಲೇ ಅಡರಕಟ್ಟಿ ಸೇರಿದಂತೆ ಮತ್ತಿತರ ಕಡೆ ನೂತನ ಗ್ರಂಥಾಲಯಗಳು ನಿರ್ಮಾಣಗೊಂಡಿದ್ದು, ಇನ್ನು ಕೆಲ ದಿನಗಳಲ್ಲಿ ಪುಟಗಾಂವ್ ಬಡ್ನಿ ಗ್ರಾಮದಲ್ಲಿ ಗ್ರಂಥಾಲಯ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಗುವುದು ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಸ್ವಾಮೀಜಿ ಮಾತನಾಡಿ, ಗ್ರಂಥಾಲಯಗಳು ಜ್ಞಾನ ತುಂಬಿದ ಕಣಜಗಳು. ನಮ್ಮ ನಾಡಿನ ಇತಿಹಾಸ, ಆಚರಣೆ, ಪರಂಪರೆ, ಸಂಸ್ಕೃತಿ ಬಿಂಬಿಸುವ ಪುಸ್ತಕಗಳನ್ನು ಓದಿ ಜ್ಞಾನ ಹೆಚ್ಚಿಸಿಕೊಳ್ಳಬೇಕು. ಅದರಲ್ಲೂ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆ ಪಾಸಾಗಲು ಅಗತ್ಯವಿರುವ ಪುಸ್ತಕಗಳು ಗ್ರಂಥಾಲಯಗಳಲ್ಲಿ ಉಚಿತವಾಗಿ ಸಿಗುತ್ತವೆ. ಅವುಗಳ ಉಪಯೋಗ ಪಡೆದುಕೊಂಡು ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಗ್ರಾ.ಪಂ ಅಧ್ಯಕ್ಷೆ ಸಂಗೀತಾ ರಾಘವೇಂದ್ರ ಪೂಜಾರ ಕಾರ್ಯಕ್ರಮ ಉದ್ಘಾಟಿಸಿದರು. ನಿವೃತ್ತ ಲೋಕಾಯುಕ್ತ ಶಂಕರ ರಾಗಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಕೃಷ್ಣಪ್ಪ ಧರ್ಮರ, ಶ್ರೀಶೈಲ, ಅಪ್ಪಣ್ಣ ನುಲ್ವಿ, ಬಸವರಾಜ ಕಳಸದ, ಅಶೋಕ ಶಿರಹಟ್ಟಿ, ಡಿ.ವೈ. ಹುನಗುಂದ, ರಾಮಣ್ಣ ಲಮಾಣಿ, ಯಲ್ಲಪ್ಪ ತಳವಾರ, ರಾಜಣ್ಣ ಹುಲಗೂರ, ಸೋಮಣ್ಣ ಡಾಣಗಲ್ಲ, ಡಾ. ವಿನೋದ ಹೊನ್ನಿಕೊಪ್ಪ, ಬಸಣ್ಣ ಕರ್ಜಗಿ, ಶೈಲಾ ಹೂಗಾರ, ರೇಣುಕಾ ಅತಡಕರ, ಜಯಶ್ರೀ ತಳವಾರ, ಮಾದೇವಿ ತಳವಾರ, ಮಮತಾಜ್‌ಬೀ ಶಿರಬಡಗಿ, ಹುಸೇನಸಾಬ ಗೂಡೂರ, ಸಂತೋಷ ತಾಂದಳೆ, ಮುದಕಪ್ಪ ಗಾಡದ, ಶಿವಣ್ಣ ಕುರಿ ಮತ್ತಿತರರು ಇದ್ದರು.

# ನಿಧನ


## ಪ್ರಫುಲ್ ಸೋನಗೋಜಿ



**ಮುಳಗುಂದ:** ಪಟ್ಟಣದ ತಿಗಡಿಕೇರಿ ಓಣಿಯ ನಿವಾಸಿ ಪ್ರಫುಲ್ ಸೋನಗೋಜಿ (37) ಮಂಗಳವಾರ ನಿಧನರಾಗಿದ್ದಾರೆ.

ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

## ಪ್ರಿಯಾಂಕ್ ಖರ್ಗೆ ಸರ್ವಾಧಿಕಾರಿ ನಡೆ



■ವಿಜಯಸಾಕ್ಷಿ ಸುದ್ದಿ, ಗದಗ

ಆರ್.ಎಸ್.ಎಸ್ ನಿಷೇಧದ ಕುರಿತು ಸಿಎಂ ಸಿದ್ಧರಾಮಯ್ಯರಿಗೆ ಪತ್ರ ಬರೆಯುವ ಮೂಲಕ ತಮ್ಮ ಹಿಂದೂ ವಿರೋಧಿ ಮನಸ್ಥಿತಿಯನ್ನು ಸಾಬೀತುಪಡಿಸಿರುವ ಸಚಿವ ಪ್ರಿಯಾಂಕ್ ಖರ್ಗೆ ಸರ್ವಾಧಿಕಾರಿ ನಡೆ ಅನುಸರಿಸುತ್ತಿದ್ದಾರೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯ ಆರಂಭಿಕ ತೊಡಕುಗಳು ಹಾಗೂ ಗ್ಯಾರಂಟಿಗಳ ಆಮಿಷದಿಂದಾಗಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಈಗ ತನ್ನ ಅಧಿಕಾರವನ್ನು ಮನಬಂದಂತೆ ಚಲಾಯಿಸುತ್ತಿದೆ.

ಪ್ರಿಯಾಂಕ್ ಖರ್ಗೆ ಮೊದಲಿನಿಂದಲೂ ಹಿಂದೂ ವಿರೋಧಿ ನಿಲುವುಗಳನ್ನು ಬಿತ್ತುತ್ತಿದ್ದು, ಈಗ ಹಿಟ್ಲರ್‌ಶಾಹಿ ಧೋರಣೆ ಅನುಸರಿಸುತ್ತಿದ್ದಾರೆ. ಸಮಾಜಕ್ಕೆ ಕಂಟಕಪ್ರಾಯವಾದ ಎಸ್.ಡಿ.ಪಿ.ಐ ಹಾಗೂ ಪಿಎಫ್‌ಐನಂಥಹ ಸಂಘಟನೆಗಳನ್ನು ನಿಷ್ಕ್ರಿಯಗೊಳಿಸುವುದು ಬಿಟ್ಟು ಭಾರತದ ಶ್ರೇಷ್ಠ ಸಂಘಟನೆಯಾದ ಆರ್.ಎಸ್.ಎಸ್ ನಿಯಂತ್ರಣದ ಕುರಿತು ಯೋಚಿಸುತ್ತಿರುವುದು ಇವರ ಮನಸ್ಥಿತಿಯನ್ನು ಸೂಚಿಸುತ್ತದೆ.

ಇಂಥಹ ಹೇಳಿಕೆ ನೀಡಿ ಹಿಂದೂಗಳ ಕೆಂಗಣ್ಣಿಗೆ ಗುರಿಯಾಗಿರುವ ಪ್ರಿಯಾಂಕ್ ಖರ್ಗೆ ಮೇಲೆ ರಾಜ್ಯ ಸರ್ಕಾರ ಕ್ರಮ ಕೈಕೊಳ್ಳದೇ ಇರುವುದು ಇನ್ನೂ ಅನುಮಾನಕ್ಕೆ ಕಾರಣವಾಗಿದೆ. ಓಲೈಕೆ ರಾಜಕಾರಣವನ್ನು ಪೋಷಿಸುತ್ತಾ ಬಂದಿರುವ ಕಾಂಗ್ರೆಸ್ ಸರ್ಕಾರ ಇದೇ ರೀತಿ ಹಿಟ್ಲರ್‌ಶಾಹಿ ಆಡಳಿತ ನಡೆಸುತ್ತಿದ್ದರೆ ಮತ್ತೆನ್ನೆಂದೂ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

'ವ್ಯವಸ್ಥೆಯ ಸುಧಾರಣೆಯಲ್ಲಿ ನಮ್ಮ ಪಾತ್ರ' ವಿಷಯದ ಕುರಿತು ವಿಚಾರ ಸಂಕಿರಣ

# ಹಣ ಹಂಚಿಕೆಯಿಂದ ಪ್ರಜಾಪ್ರಭುತ್ವಕ್ಕೆ ಧಕ್ಕೆ

■ವಿಜಯಸಾಕ್ಷಿ ಸುದ್ದಿ, ತುಮಕೂರು

ಚುನಾವಣಾ ದೃಷ್ಟಿಯಲ್ಲಿ ರೂಪಿತವಾಗುವ ಎಲ್ಲಾ ಯೋಜನೆಗಳನ್ನು ರದ್ದುಮಾಡಿ ಜನಪರ ಬಜೆಟ್ ಹೆಸರಿನಲ್ಲಿ ಹಣ ಹಂಚಿಕೆಯಾಗುತ್ತಿರುವುದು ಪ್ರಜಾಪ್ರಭುತ್ವದ ಆಶಯಕ್ಕೆ ಧಕ್ಕೆ ಆಗಿದೆ. ಚುನಾವಣೆ ವ್ಯವಸ್ಥೆಯಲ್ಲಿ ಹಣ ಹಂಚಿಕೆಯಾಗುವುದನ್ನು ತಡೆಗಟ್ಟುವ ಮೂಲಕ ಚುನಾವಣೆಗಳಲ್ಲಿ ಸುಧಾರಣೆ ತರಲು ಸಾಧ್ಯ ಎಂದು ಮಾಜಿ ಸಚಿವ ಜೆ.ಸಿ. ಮಾಧುಸ್ವಾಮಿ ಹೇಳಿದರು.

ತುಮಕೂರಿನ ಕನ್ನಡ ಭವನದಲ್ಲಿ ಜೆ.ಹೆಚ್. ಪಟೇಲ್ ಪ್ರತಿಷ್ಠಾನದ ವತಿಯಿಂದ ಜೆ.ಹೆಚ್. ಪಟೇಲ ಅವರ 96ನೇ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ 'ವ್ಯವಸ್ಥೆಯ ಸುಧಾರಣೆಯಲ್ಲಿ ನಮ್ಮ ಪಾತ್ರ' ಎಂಬ ವಿಷಯದ ಕುರಿತು ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಗೃಹಲಕ್ಷ್ಮೀ, ಶಕ್ತಿ ಯೋಜನೆಗಳಿಂದ ಮಹಿಳೆಯರ ಸಬಲೀಕರಣ ಸಾಧ್ಯವಿಲ್ಲ. ಹಾಗೆಯೇ ವಿಶ್ವದ ಏಳನೇ ದೊಡ್ಡ ರಾಷ್ಟ್ರವಾಗಿರುವ ಭಾರತ ಸಾಲದಲ್ಲಿಯೂ ಏಳನೇ ಸ್ಥಾನದಲ್ಲಿ ಇರುವುದು ವಿಪರ್ಯಾಸ ಎಂದರು. ಮಾಜಿ ಮುಖ್ಯಮಂತ್ರಿ ಜೆ.ಎಚ್. ಪಟೇಲರು ತಮ್ಮ ಸಹೋದರಿಯನ್ನೇ ಜಿ.ಪಂ ಅಧ್ಯಕ್ಷರನ್ನಾಗಿಸಬೇಕು ಎಂಬ ಒತ್ತಡವಿದ್ದರೂ ನನ್ನನ್ನು ಜಿ.ಪಂ ಅಧ್ಯಕ್ಷರನ್ನಾಗಿಸಿ ಕುಟುಂಬವನ್ನು ರಾಜಕೀಯದಿಂದ ದೂರ ಉಳಿಯುವಂತೆ ಮಾಡಿದರು.




ಜನರನ್ನು ಯಾರು ಅನುಸರಿಸುತ್ತಾರೋ ಅವರು ಜನನಾಯಕರು ಎನ್ನುವಂತಹ ಪರಿಸ್ಥಿತಿ ಬದಲಾಗಿದೆ. ಜಾತಿಯ ಸೋಂಕು ಮಿತಿ ಮೀರಿದೆ. ಸಿದ್ಧರಾಮಯ್ಯ ಕುರುಬ ಸಮುದಾಯವನ್ನು ಎಸ್ಟಿಗೆ ಸೇರಿಸಲು ಹೊರಟಿರುವುದು ನಿಜಕ್ಕೂ ನಂಬಲು ಸಾಧ್ಯವಿಲ್ಲ. ಲಿಂಗಾಯತರು ನಮ್ಮನ್ನು ಓಬಿಸಿ ಸೇರಿಸಿ ಎನ್ನುವುದರಲ್ಲಿ ತಪ್ಪಿಲ್ಲ ಎನಿಸುತ್ತದೆ. ಕೆ.ಎನ್. ರಾಜಣ್ಣ ಸತ್ಯ ಹೇಳಿ ಮಂತ್ರಿ ಸ್ಥಾನ ಕಳೆದುಕೊಂಡರು. ಚುನಾಯಿತ ಪ್ರತಿನಿಧಿಯನ್ನು ತನ್ನ ಕಪಿಮುಷ್ಠಿಯಲ್ಲಿ ಇಟ್ಟುಕೊಳ್ಳುವ ಹೈಕಮಾಂಡ್ ಸಂಸ್ಕೃತಿಗೆ ಕಡಿವಾಣ ಹಾಕಬೇಕಾಗಿದೆ ಎಂದು ಜೆ.ಸಿ. ಮಾಧುಸ್ವಾಮಿ ಹೇಳಿದರು.

ಇಂಥವರ ಸಂಖ್ಯೆ ರಾಜಕಾರಣದಲ್ಲಿ ಹೆಚ್ಚಾದಾಗ ಮಾತ್ರ ಧ್ವನಿ ಇಲ್ಲದ ಸಮುದಾಯಗಳಿಗೆ ರಾಜಕೀಯ ಅಧಿಕಾರ ದೊರೆಯಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜೆ.ಹೆಚ್. ಪಟೇಲ್ ಪ್ರತಿಷ್ಠಾನದ ವ್ಯವಸ್ಥಾಪಕರಾದ ಮಹಿಮ ಜೆ.ಪಟೇಲ್ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಶಾಸಕ ಎಂ.ಪಿ. ನಾಡಗೌಡ ವಹಿಸಿದ್ದರು. ಶಾಸಕ ಜಿ.ಬಿ. ಜ್ಯೋತಿಗಣೇಶ, ಜೆ.ಹೆಚ್. ಪಟೇಲ ಪ್ರತಿಷ್ಠಾನದ ಅಧ್ಯಕ್ಷರಾದ ಶ್ರೀಶೂಲ ಪಾಣಿ, ಧರ್ಮದರ್ಶಿ ಟಿ. ಪ್ರಭಾಕರ, ಜೆ.ಡಿ.ಯು ಆಗ್ನೇಯ ಪದವೀಧರ ಕ್ಷೇತ್ರದ ಜೆಡಿಯು ಅಭ್ಯರ್ಥಿ ಡಾ. ಕೆ. ನಾಗರಾಜು, ಡಾ. ಎಸ್.ಎಸ್. ರಡ್ಡೇರ ಐಪಿಸಿಪಿ ರಾಜ್ಯ ಅಧ್ಯಕ್ಷರು ಉಪಸ್ಥಿತರಿದ್ದರು.

## ಒಳ ಮೀಸಲಾತಿ ಹೋರಾಟಗಾರರ ಒತ್ತಡಕ್ಕೆ ಮಣಿದ ಸರ್ಕಾರ: ಮಣಿವಣ್ಣನ್ ವರ್ಗಾವಣೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಒಳ ಮೀಸಲಾತಿ ಹೋರಾಟಗಾರರ ಒತ್ತಡಕ್ಕೆ ಮಣಿದ ರಾಜ್ಯ ಸರ್ಕಾರ ಹಿರಿಯ ಐಎಎಸ್ ಅಧಿಕಾರಿ, ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೇಜರ್ ಮಣಿವಣ್ಣನ್ ಪಿ ಅವರನ್ನು ವರ್ಗಾವಣೆ ಮಾಡಿದೆ.

ಮಣಿವಣ್ಣನ್ ಜಾಗ-ಕ್ಕೆ ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಣದೀಪ್ ಡಿ ಅವರನ್ನು ನೇಮಕ ಮಾಡಲಾಗಿದೆ.

ಮಣಿವಣ್ಣನ್ ಸೇರಿದಂತೆ ಹಲವು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯ ಉನ್ನತ ಹುದ್ದೆಗಳಲ್ಲಿರುವ ಅಧಿಕಾರಿಗಳನ್ನು ವರ್ಗಾವಣೆ ಮಾಡಬೇಕೆಂದು ಒಳ ಮೀಸಲಾತಿ ಹೋರಾಟಗಾರರು ಸರ್ಕಾರವನ್ನು ಆಗ್ರಹಿಸಿದ್ದರು.

ಒಳಮೀಸಲಾತಿ ಜಾರಿ ವಿಳಂಬ ಹಿನ್ನೆಲೆ ರಾಜೀನಾಮೆಗೆ ಒತ್ತಾಯಿಸಿ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ ಮಹದೇವಪ್ಪ ಅವರ ಮನೆಗೆ ಇತ್ತೀಚೆಗೆ ಮುತ್ತಿಗೆ ಹಾಕಲು ಮುಂದಾದಾಗಲೂ ಹೋರಾಟಗಾರರು ಮಣ್ಣಿವಣ್ಣನ್ ಸಹಿತ ಅಧಿಕಾರಿಗಳ ವರ್ಗಾವಣೆಗೆ ಒತ್ತಾಯಸಿದ್ದರು.

## ಕಿಡಿಗೇಡಿಗಳನ್ನು ಬಂಧಿಸಲು ಆಗ್ರಹ



■ವಿಜಯಸಾಕ್ಷಿ ಸುದ್ದಿ, ಗದಗ

ಅಂಬಿಗರ ಚೌಡಯ್ಯನವರ ಮೂರ್ತಿಯನ್ನು ಭಗ್ನಗೊಳಿಸಿದ ಕಿಡಿಗೇಡಿಗಳನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಲು ಶ್ರೀ ನಿಜಶರಣ ಅಂಬಿಗರ ಚೌಡಯ್ಯ ವಿವಿಧೋದ್ದೇಶಗಳ ಟ್ರಸ್ಟ್ ಮತ್ತು ಗದಗ ತಾಲೂಕಾ ಸಮಿತಿ ವತಿಯಿಂದ ಪ್ರತಿಭಟನೆ ನಡೆಸಿ ಗದಗ ತಾಲೂಕ ತಹಸೀಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಜೆ.ಬಿ. ಗಾರವಾಡ ಮಾತನಾಡಿ, ಕಲಬುರ್ಗಿ ಜಿಲ್ಲೆ ಶಹಬಾದ ತಾಲೂಕಿನ ಮುತ್ತಗ ಗ್ರಾಮದಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿಯನ್ನು ಭಗ್ನಗೊಳಿಸಿ ಅಟ್ಟಹಾಸವನ್ನು ಮೆರೆದ ಕಿಡಿಗೆಡಿಗಳ ಕೃತ್ಯವನ್ನು ಅಂಬಿಗರ ಸಮಾಜ ತೀವ್ರವಾಗಿ ಖಂಡಿಸುತ್ತದೆ. ರಾಜ್ಯ ಸರ್ಕಾರ ಕೂಡಲೇ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ತಾಲೂಕಾಧ್ಯಕ್ಷ ಡಾ. ಗಣೇಶ ಸುಲ್ತಾನಪೂರ ಮಾತನಾಡಿ, ಶ್ರೇಷ್ಠ ಸಮಾಜ ಸುಧಾರಕರ ಪುತ್ಥಳಿಗೆ ಇಂತಹ ಅಪಮಾನ ಮಾಡಿರುವುದು ಇಡೀ ಮನುಕುಲಕ್ಕೆ ಮಾಡಿರುವ ಅಪಮಾನವಾಗಿದೆ. ರಾಜ್ಯದಲ್ಲಿ ಇಂತಹ ಪ್ರಕರಣಗಳು ಹೆಚ್ಚುತ್ತಿದ್ದು, ರಾಜ್ಯ ಸರ್ಕಾರ ಇದಕ್ಕೆ ವಿಶೇಷ ಕಾನೂನು ಜಾರಿ ಮಾಡಿ ತಪ್ಪಿತಸ್ಥರನ್ನು ಕೂಡಲೇ ಬಂಧಿಸಿ ಗಡಿಪಾರು ಮಾಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಟ್ರಸ್ಟಿನ ಸದಸ್ಯರಾದ ಮಂಜುನಾಥ ಸುಣಗಾರ, ಶ್ರೀಧರ ಸುಲ್ತಾನಪುರ, ಸುಭಾಸ ಕದಡಿ ಸೇರಿದಂತೆ ಮುಖಂಡರಾದ ಪ್ರಕಾಶ ಪೂಜಾರ, ಬಸವರಾಜ ಜಿಗಳೂರ, ಹನಮಂತಪ್ಪ ಮಾನ್ವಿ, ಗೋಪಾಲ ಲಕ್ಷ್ಮೇಶ್ವರ, ಕೃಷ್ಣಾ ಬಾರಕೇರ, ವಿನೋದ ಜಕನೂರ, ನೀಲಕಂಠ ಗುಡಿಸಾಗರ, ಕಿರಣ ಕದಡಿ, ಜಿ.ಬಿ. ನರಗುಂದ, ನಾಗರಾಜ ಗುಡಿಸಾಗರ ಮುಂತಾದವರಿದ್ದರು.

## ಇಡೀ ಭಾರತವೇ ತಲೆತಗ್ಗಿಸುವ ಕೃತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಸುಪ್ರೀಮ್ ಕೋರ್ಟ್‌ನ ನ್ಯಾಯಮೂರ್ತಿ ಬಿ.ಆರ್. ಗವಾಯಿಯವರ ಮೇಲೆ ಶೂ ಎಸೆದ ಪ್ರಕರಣ ಇಡೀ ಭಾರತದ ಜನತೆ ತಲೆ ತಗ್ಗಿಸುವ ಕೃತ್ಯವಾಗಿದೆ ಎಂದು ಗದಗ ಜಿಲ್ಲಾ ಬಂಜಾರ ಹೋರಾಟಗಾರ ಮತ್ತು ಗದಗ ಜಿಲ್ಲಾ ಕಾಂಗ್ರೆಸ್ ಪಕ್ಷದ ಮಾಧ್ಯಮ ವಕ್ತಾರ ಸೋಮಪ್ಪ ಪಾಂಡಪ್ಪ ಲಮಾಣಿ ಖಂಡಿಸಿದ್ದಾರೆ.




ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಿಶೋರ ಅನ್ನುವ ವಕೀಲ ತಾನೊಬ್ಬ ವಿದ್ಯೆ ಇಲ್ಲದ ಅನಾಗರಿಕನಂತೆ ವರ್ತಿಸಿ ನ್ಯಾಯಮೂರ್ತಿಗಳ ಮೇಲೆ ಅಗೌರವವಾಗಿ ನಡೆದುಕೊಂಡಿದ್ದು ಇಡೀ ಭಾರತದ ಪ್ರಜೆಗಳಿಗೆ ನೋವಾಗಿದೆ. ಭಾರತೀಯರಾದ ನಾವು ಸಮಾನತೆಯ ಬದುಕು ಬಾಳುತ್ತಿದ್ದೇವೆ. ಇಂಥ ದೇಶದ್ರೋಹಿಗಳ ವಿರುದ್ಧ ನಾವೆಲ್ಲರೂ ಒಂದಾಗಿ ಹೋರಾಟ ಮಾಡುವದು ಅನಿವಾರ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

## ಕಿತ್ತೂರ ಉತ್ಸವ ಜ್ಯೋತಿಗೆ ಸ್ವಾಗತ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಅಕ್ಟೋಬರ್ 23ರಂದು ಆರಂಭವಾಗುವ ಕಿತ್ತೂರ ಉತ್ಸವದ ಅಂಗವಾಗಿ ಆಗಮಿಸಿದ ರಾಣಿ ಚನ್ನಮ್ಮಳ ಜ್ಯೋತಿಯನ್ನು ಲಕ್ಕುಂಡಿ ಗ್ರಾಮಸ್ಥರು ಸಂಭ್ರಮದಿಂದ ಬರಮಾಡಿಕೊಂಡರು.

ದಂಡಿನ ದುರ್ಗಾದೇವಿ ದೇವಸ್ಥಾನದ ಹತ್ತಿರ ಜ್ಯೋತಿಗೆ ಹೂಮಾಲೆ ಹಾಕಿ ಪೂಜೆ ಸಲ್ಲಿಸಿ, ಸ್ವಾಗತಿಸಿ, ಅತ್ತಿಮಬ್ಬೆ ಮಹಾದ್ವಾರದವರೆಗೂ ಮೆರವಣಿಗೆಯೊಂದಿಗೆ ಬಿಳ್ಕೊಡಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ, ಸಣ್ಣ ಉಳಿತಾಯ ಮತ್ತು ಪಿಂಚಣಿ ಇಲಾಖೆಯ ಸಹಾಯಕ ನಿರ್ದೇಶಕ ಶ್ರೀಧರ ಚಿನ್ನಗುಡಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ರಾಜು ಕಂಠಿಗೊಣ್ಣವರ, ಕೃಷಿ ಇಲಾಖೆ ಅಧೀಕ್ಷಕ ಶರಣಯ್ಯ ಪಾರ್ವತಿಮಠ ಸೇರಿದಂತೆ ಗ್ರಾಮದ ಗಣ್ಯರು, ಮಹಿಳೆಯರು ಪಾಲ್ಗೊಂಡಿದ್ದರು.




## ಉಚಿತ ಪ್ರಚಾರ ಪಡೆಯಲು ಅಪ್ರಸ್ತುತ ಹೇಳಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಿಯಾಂಕ್ ಖರ್ಗೆ ಅವರು ನವೆಂಬರ್ ಕ್ರಾಂತಿಯವರೆಗೆ ತಮ್ಮ ಸಚಿವ ಸ್ಥಾನವನ್ನು ಉಳಿಸಿಕೊಳ್ಳಲು, ಹೈಕಮಾಂಡ್ ಅನ್ನು ಸಮಾಧಾನಪಡಿಸಲು, ಉಚಿತ ಪ್ರಚಾರ ಪಡೆಯಲು ಅಪ್ರಸ್ತುತ ಹೇಳಿಕೆಗಳನ್ನು ನೀಡುತ್ತಿದ್ದಾರೆ ಗದಗ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನಿಡಿರುವ ಅವರು, ಪ್ರಿಯಾಂಕ್ ಖರ್ಗೆ ಅವರ ಬುದ್ಧಿಶಕ್ತಿ ಏಕ ಆಯಾಮವುದ್ದಾಗಿರಬಹುದು. ಆರ್‌ಎಸ್‌ಎಸ್ ರಾಷ್ಟ್ರ ನಿರ್ಮಾಣದ ಮೇಲೆ ಕೇಂದ್ರೀಕರಿಸಿದ ಸಂಘಟನೆಯಾಗಿದೆ. ಅಂತಹ ದೇಶಭಕ್ತ ಗುಂಪಿನ ಚಟುವಟಿಕೆಗಳನ್ನು ನಿಷೇಧಿಸುವ ಗುರಿಯನ್ನು



ಹೊಂದಿರುವ ಪತ್ರವನ್ನು ನಾವು ಪರಿಶೀಲಿಸಿದರೆ, ಅದನ್ನು ಮುಖ್ಯಮಂತ್ರಿಗೆ ದುರುದ್ದೇಶದಿಂದ ಕಳುಹಿಸಲಾಗಿದೆ ಎಂಬುದು ಸ್ಪಷ್ಟವಾಗುತ್ತದೆ. ಜವಾಬ್ದಾರಿಯುತ ಸ್ಥಾನವನ್ನು ಹೊಂದಿರುವ ಅವರು ಗ್ರಾಮೀಣಾಭಿವೃದ್ಧಿಯಲ್ಲಿ ಕ್ರಾಂತಿಕಾರಿ ಕೆಲಸದಲ್ಲಿ ತೊಡಗಿಸಿಕೊಳ್ಳುವ ಅವಕಾಶವನ್ನು ಹೊಂದಿದ್ದಾರೆ. ಐಟಿ, ಬಿಟಿ ಮತ್ತು ಎಲೆಕ್ಟ್ರಾನಿಕ್ಸ್ ವಲಯಗಳಲ್ಲಿ ಪರಿವರ್ತನಾತ್ಮಕ ಉಪಕ್ರಮಗಳಿಗೆ ಅವಕಾಶಗಳಿವೆ. ಮಲ್ಲಿಕಾರ್ಜುನ ಖರ್ಗೆಯವರ ಮಗನಾಗಿರುವುದು ಅರ್ಹತೆಯಲ್ಲ, ಬದಲಾಗಿ ಯಾವುದೇ ಸ್ಪಷ್ಟ ಸಾಧನೆಗಳಿಲ್ಲದ ಸಚಿವರಾಗಿ ಅವರ ಅಸಮರ್ಥತೆಯ ಸಂಕೇತವಾಗಿದೆ ಎಂದು ಅವರು ವ್ಯಂಗ್ಯವಾಡಿದ್ದಾರೆ.

ಸಂಘವನ್ನು ಟೀಕಿಸಲು ಅವರಿಗೆ ಯಾವ ನೈತಿಕ ಸ್ಥಾನಮಾನವಿದೆ? ರಾಜ್ಯದ ನಾಗರಿಕರಿಗೆ ಅಸಾಧಾರಣ ಸೇವೆಯನ್ನು ನೀಡುವ ಮೂಲಕ ಮಾತನಾಡಲಿ. ಕಾನೂನು ಮತ್ತು ಸುವ್ಯವಸ್ಥೆ ಪರಿಸ್ಥಿತಿ ಹದಗೆಡುತ್ತಿದೆ, ಗುಂಡಿಗಳು ಬಗೆಹರಿಯದೆ ಉಳಿದಿವೆ, ರೈತರು ಪ್ರವಾಹದಿಂದಾಗಿ ಬೆಳೆ ನಷ್ಟವನ್ನು ಅನುಭವಿಸಿದ್ದಾರೆ. ಮೊದಲು ಈ ಸಮಸ್ಯೆಗಳನ್ನು ಪರಿಹರಿಸಲು ಖರ್ಗೆ ಅವರಿಗೆ ಸವಾಲು ಹಾಕಿದ್ದಾರೆ.

## ಅಗಲಿದ ರಂಗಕರ್ಮಿಗಳಿಗೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕಲಾವಿದರ ಹಾಗೂ ಸಾಂಸ್ಕೃತಿಕ ಸಂಘಟನೆಗಳ ಹಿತರಕ್ಷಣಾ ವೇದಿಕೆಯ ವತಿಯಿಂದ ಸೋಮವಾರ ನಿಧನರಾದ ಉತ್ತರ ಕರ್ನಾಟಕದ ಹಿರಿಯ ರಂಗಕಲಾವಿದರಾದ ಡಾ. ರಾಜು ತಾಳಿಕೋಟಿ ಹಾಗೂ ರಂಗಕಲಾವಿದರಾದ ಡಾ. ಯಶವಂತ ಸರದೇಶಪಾಂಡೆ, ಪ್ರೊ. ಆರ್. ಎನ್. ಕುಲಕರ್ಣಿ, ಪ್ರೊ. ಎಂ.ಎಸ್. ಕುಲಕರ್ಣಿ, ಕರಮುಡಿ ಗ್ರಾಮದ ಖಾಜಾಸಾಬ, ಜಾನಪದ ಕ್ಷೇತ್ರದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ದ್ಯಾಮಲಪ್ಪ ಲಮಾಣಿ ಹಾಗೂ ಡಿ. ಹನಮಕ್ಕ ಅವರಿಗೆ ಎರಡು ನಿಮಿಷ ಮೌನ ಆಚರಿಸಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.



ಸಭೆಯ ಅಧ್ಯಕ್ಷತೆಯನ್ನು ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ಶಂಕ್ರಣ್ಣ ಸಂಕಣ್ಣವರ ವಹಿಸಿದ್ದರು. ಹಿರಿಯ ಸಾಂಸ್ಕೃತಿಕ ಚಿಂತಕರಾದ ಡಾ. ಜಿ.ಬಿ. ಪಾಟೀಲ, ಪ್ರೊ. ಅನ್ನದಾನಿ ಹಿರೇಮಠ, ಬಿ.ಬಿ. ಬಣ್ಣದ, ವೀರೇಶ ಕಿತ್ತೂರ, ಕಲ್ಲಿನಾಥಶಾಸ್ತ್ರೀ ಅಡ್ನೂರ, ಅಂದಾನೆಪ್ಪ ವಿಭೂತಿ, ಐ.ಕೆ. ಕಮ್ಮಾರ, ವಿಜಯಕುಮಾರ ಜಿತೂರಿ, ವಿರೂಪಾಕ್ಷಪ್ಪ ಕ್ಷತ್ರಿಯ, ಬಸವರಾಜ ನಿ.ಹೂಗಾರ, ಸೋಮಶೇಖರ ಚಿಕ್ಕಮಠ, ಶಿವು ಭಜಂತ್ರಿ, ಬಸವರಾಜ ಈರಣ್ಣವರ, ಜಿ.ವಿ. ಬೊಮ್ಮಪ್ಪನವರ, ಬಸವರಾಜ ಹಡಗಲಿ, ಡಾ. ಗೋವಿಂದಪ್ಪ ವೇಶಧಾರಿ, ಅಶೋಕ ಬಡಿಗೇರ, ಸುಭಾಸ ಮಳಗಿ, ಎಂ.ಎಸ್. ಮಾದರ, ಎಂ.ಬಿ. ಹವಾಲ್ದಾರ, ದೇವು ಲಮಾಣಿ, ರಂಗಪ್ಪ ಹುಯಿಲಗೋಳ, ಜ್ಯೋತಿಶ್ರೀ ಎಂ.ಎಲ್, ಪ್ರಕಾಶ ಕುರುಬರ, ಪಾರ್ವತಿ ಕುರುಬರ, ಡಾ. ಪ್ರಭು ಗಂಜಿಹಾಳ, ನಿಂಗಪ್ಪ ಗುಡ್ಡದ, ಚಿದಾನಂದ ಅನವಾಳ ಸೇರಿದಂತೆ ಸಾಹಿತಿಗಳು, ಕಲಾವಿದರು ಪಾಲ್ಗೊಂಡಿದ್ದರು. ಹವ್ಯಾಸಿ ರಂಗಕರ್ಮಿ ಮೌನೇಶ ಸಿ.ಬಡಿಗೇರ (ನರೇಗಲ್ಲ) ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ರಾಣಿ ಚನ್ನಮ್ಮ ಜಯಂತಿ ಆಚರಣೆಗೆ ಸೂಚನೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸರಕಾರದ ನಿರ್ದೇಶನದಂತೆ ಅ.23ರಂದು ತಹಸೀಲ್ದಾರ ಕಚೇರಿಯಲ್ಲಿ ವೀರರಾಣಿ ಕಿತ್ತೂರು ಚನ್ನಮ್ಮ ಜಯಂತಿಯನ್ನು ಆಚರಣೆ ಮಾಡಲಾಗುವುದು. ಜೊತೆಗೆ ಎಲ್ಲ ಇಲಾಖಾ ಕಚೇರಿಗಳಲ್ಲೂ ಸಹ ಜಯಂತಿ ಆಚರಿಸುವಂತೆ ಎಲ್ಲ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಹಸೀಲ್ದಾರ ರಾಘವೇಂದ್ರರಾವ್ ಕೆ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ಕಿತ್ತೂರು ಚನ್ನಮ್ಮ ಜಯಂತಿ ಅಂಗವಾಗಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತಾಲೂಕಿನ ಎಲ್ಲ ಶಾಲಾ-ಕಾಲೇಜುಗಳಲ್ಲೂ ಸಹ ಜಯಂತಿ ಆಚರಣೆ ಮಾಡಬೇಕು. ಈ ಬಗ್ಗೆ ಸುತ್ತೋಲೆಯನ್ನು ಹೊರಡಿಸಲಾಗುವುದು. ಅಧಿಕಾರಿಗಳು ಮತ್ತು ಸಮಾಜದ ಮುಖಂಡರು ಭಾಗಿಯಾಗಿ ಕಚೇರಿಯಲ್ಲಿ ನಡೆಯುವ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಹೇಳಿದರು. ತಾಲೂಕಾ ವೀರಶೈವ ಲಿಂಗಾಯತ ಸಂಘದ ಮುಖಂಡ ಎಸ್.ಎಸ್. ಪಾಟೀಲ ಮಾತನಾಡಿ, ತಾಲೂಕಿನ ಎಲ್ಲ ಪ್ರೌಢಶಾಲೆಗಳಲ್ಲಿ ಕಿತ್ತೂರು ಚನ್ನಮ್ಮಳ ಕುರಿತು ಪ್ರಬಂಧ ಸ್ಪರ್ಧೆಯನ್ನು ನಡೆಸಿ ಅದರಲ್ಲಿ ತಾಲೂಕಿಗೆ ಪ್ರಥಮ, ದ್ವಿತೀಯ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಕೆಲಸವಾಗಬೇಕೆಂದು ಹೇಳಿದರು.

ವೀರಶೈವ ಲಿಂಗಾಯತ ಸಂಘದ ತಾಲೂಕಾಧ್ಯಕ್ಷ ಬಿ.ಡಿ. ಪಲ್ಲೇದ, ಬಸವರಾಜ ಸಾಲಿ, ಅಶೋಕ ಬಳ್ಳಾರಿ, ತಿಪ್ಪಣ್ಣ ಕೊಂಚಿಗೇರಿ, ಅಶೋಕ ವರವಿ, ನಂದಾ ಪಲ್ಲೇದ, ಶಿವಪ್ಪ ಹದ್ಲಿ, ಬಸವರಾಜ ತುಳಿ, ಯಲ್ಲಪ್ಪ ಇಂಗಳಗಿ, ಬಸವರಾಜ ವಡವಿ, ಎಸ್.ಬಿ. ಹೊಸೂರ, ಅಶೋಕ ಹದ್ಲಿ, ಎಂ.ಎ. ಪಾಟೀಲ, ಬಸವರಾಜ ಚಿಕ್ಕತೋಟದ, ಮಹೇಶ ಮತ್ತೂರ, ಶರಣಪ್ಪ ಹೊಂಬಳ, ಚನ್ನವೀರಗೌಡ ಪಾಟೀಲ, ಹಾಲಪ್ಪ ದುಗ್ಗಾಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದರು.

## ಇಂದು ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆ.ವ್ಹಿ ಶಿಂಗಟಾಲೂರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಅ. 15ರಂದು ವಿಜಯನಗರ ಜಿಲ್ಲಾ ಹೂವಿನಹಡಗಲಿಯ ರಾಜವಾಳ ಗ್ರಾಮದಲ್ಲಿ ಕೆ.ಎನ್.ಎನ್.ಎಲ್ ವಿಭಾಗ-2 ಹೂವಿನಹಡಗಲಿಯವರ ಎಲ್.ಐ.ಎಸ್ 18000 ಕೆವಿಎ ಸ್ಥಾವರಕ್ಕೆ ವಿದ್ಯುತ ಸಂಪರ್ಕ ಕಲ್ಪಿಸಲು ಕೆ.ಎನ್.ಎನ್.ಎಲ್ ಲೈನ್ ಚಾರ್ಜಿಂಗ್ (ಕೆ.ಪಿ.ಟಿ.ಸಿ.ಎಲ್ ಹಾಗೂ ಕೆ.ಎನ್.ಎನ್.ಎಲ್ ಮಾರ್ಗ ಅದಲು ಬದಲು) ಕಾಮಗಾರಿ ಕೈಗೊಳ್ಳುವುದರಿಂದ ಮಧ್ಯಾಹ್ನ 2 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನೀರಾವರಿ ಪಂಪ್‌ಸೆಟ್‌ಗಳ ಮಾರ್ಗ, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ವಿನಂತಿಸಿದೆ.

ಕರ್ನಾಟಕ ಸರ್ಕಾರ
**ಗ್ರಾಮ ಪಂಚಾಯತ ಕಾರ್ಯಾಲಯ ಹುಲ್ಲೂರ**
ತಾ : ಲಕ್ಷ್ಮೇಶ್ವರ ಜಿ : ಗದಗ
e-mail : shihullur.gdg@gmail.com
ನಂ: ಗ್ರಾ.ಪಂ./ಹುಲ್ಲೂರ/ಟೆಂಡರ/2025-26/00 ದಿನಾಂಕ : 14-10-2025

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತಿಗೆದಾರ/ಸರಬರಾಜುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ **01** ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2025-26ನೇ ಸಾಲಿನ **MGNREGA** ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, **https://kppp.karnataka.gov.in** ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ಗೂಡ್ಸ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

1) **INDENT NO** : **RDPR/2025-26/IND11779**
**ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. : Rs. 12.84** Lakhs

**ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ** : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಂತೆ, ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **14-10-2025** ರಿಂದ **27-10-2025** ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ : **28-10-2025** ರಂದು 16.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತ ಹುಲ್ಲೂರ**
**ತಾಲೂಕ ಲಕ್ಷ್ಮೇಶ್ವರ ಜಿಲ್ಲಾ : ಗದಗ**

ವಾಸಾಸಂಇ/ಗದಗ/ಕೆಎಸ್ಎಂಸಿಎ/333/2025-26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka